ಸಂಪುಟ : 10 ಸಂಚಿಕೆ: 39 ಪುಟ : 4+2 ಬೆಲೆ: 3.00 ಮಂಗಳವಾರ ಮಾರ್ಚ್ 11 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 39 Pages : 4+2 Price : 3.00 Tuesday March 11 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಅಂತಾರಾಷ್ಟ್ರೀಯ ಮಾಸ್ಟರ್ ಅಥ್ಲೆಟಿಕ್ಸ್‌ಗೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಲಕ್ಷ್ಮೇಶ್ವರ ಪುರಸಭೆ ಉಮಾ ವಿದ್ಯಾಲಯದ ನಿವೃತ್ತ ದೈಹಿಕ ಶಿಕ್ಷಕರಾದ ಹೆಚ್.ಎಂ. ಮುಳಗುಂದ ಅವರು ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆದ ರಾಷ್ಟ್ರಮಟ್ಟದ ಮಾಸ್ಟರ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ 70 ವರ್ಷ ಮೇಲ್ಪಟ್ಟ ಪುರುಷರ ವಿಭಾಗದ 80 ಮೀಟರ್ ಹರ್ಡಲ್ಸ್ (ಅಡೆತಡೆ ಓಟ)ನಲ್ಲಿ ಬೆಳ್ಳಿ ಪದಕ ಪಡೆದಿದ್ದಾರೆ.

ಇಂಡೋನೇಷಿಯಾದಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ಮಾಸ್ಟರ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಅವರು ಭಾರತವನ್ನು ಪ್ರತಿನಿಧಿಸಲಿದ್ದಾರೆ. ಕ್ರೀಡಾ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ/ಸಲ್ಲಿಸುತ್ತಿರುವ ಇವರ ಸೊಸೆ ರಾಜೇಶ್ವರಿ ಬಿ.ಮುಳಗುಂದ ಭಲ್ಲೆ ಹಾಗೂ ಚಕ್ರ ಎಸೆತದಲ್ಲಿ ರಾಷ್ಟ್ರಮಟ್ಟದಲ್ಲಿ ಭಾಗವಹಿಸಿ 6ನೇ ಸ್ಥಾನ ಪಡೆದಿದ್ದಾರೆ.

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 11 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 6ರಲ್ಲಿ ಲಕ್ಕುಂಡಿ ಅವರ ಲೈನ್, ಪೋಸ್ಟ್ ಆಫೀಸ್ ಲೈನ್, ಅಕ್ಕಿ ಪ್ಲಾಟ್, ಬಾಳಿಕಾಯಿ ಅವರ ಲೈನ್, ಮುನವಳ್ಳಿ ಲೈನ್, ಸ್ಮಶಾನ ಗಟ್ಟಿ ಲೈನ್, ರಾಚೋಟೇಶ್ವರ ಗುಡಿ ಲೈನ್, ನಾಗಪ್ಪನಕಟ್ಟಿ ಲೈನ್, ಶರಣಪ್ಪ ಪಾಟೀಲರ ಲೈನ್, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 8, 9, 10, ಹೆಲ್ತ್ ಕ್ಯಾಂಪ್, ಕಬಾಡಿ ರಸ್ತೆ, ಕುರಹಟ್ಟಿ ಪೇಟೆ, ತೆಗ್ಗಿನಪೇಟೆ, ಪೊಲೀಸ್ ಕ್ವಾರ್ಟರ್ಸ್, ಗಾಜಿನ ಗ್ರೌಂಡ್, ಉಳಿದ ಕೆಲವು ಭಾಗಗಳು,

ವಾರ್ಡ್ ನಂ. 22, 21, ಕರುಗಲ್ ಲೇಔಟ್, ಶಿಗ್ಗಾಂವಿ ಲೇಔಟ್, ಕಮತರ ಪ್ಲಾಟ್, ಟವರ್ ಕಂಬ, ವಾಲ್ಮೀಕಿ ಭವನ, ಗಾರ್ಡನ್ ಲೈನ್, ಕೆಲವು ಉಳಿದ ಭಾಗಗಳು, ವಾರ್ಡ್ ನಂ. 24, 26, ಅಬ್ಬಿಗೇರಿ ಕಂಪೌಂಡ್, ಸಾಲಮನೆ, ತೆಗ್ಗಿನ ಲಾಟ್, ಕಮ್ಮಾರ ಸಾಲ್, ಉರ್ದು ಶಾಲೆ, ಮಕಾನಗಲ್ಲಿ, ಉಡಚಮ್ಮನ ಗುಡಿ, ಉಳಿದ ಭಾಗಗಳು, ವಾರ್ಡ್ ನಂ. 35ರಲ್ಲಿ ನೀಲಮ್ಮತಾಯಿ ಮಠದ ಲೈನ್, ಬನ್ನಿಗಿಡದ ಲೈನ್, ಉಳಿದ ಭಾಗಗಳು,

ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕು. ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕು. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ನಗರಸಭೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಳಿ ನಗರದ ಜನತೆಯಲ್ಲಿ ಭೀತಿ ಹುಟ್ಟಿಸಿದ್ದ ಅಂತರರಾಜ್ಯ ದರೋಡೆಕೋರರ ತಂಡವನ್ನು ಸಿನಿಮೀಯ ಶೈಲಿಯಲ್ಲಿ ಬಂಧಿಸಿದ ಪೊಲೀಸರು

# ಮುಸುಕುಧಾರಿ ದರೋಡೆಕೋರರ ತಂಡಕ್ಕೆ ಕೋಳ

■ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದಲ್ಲಿ ಎಷ್ಟೇ ಪೊಲೀಸ್ ಕಾವಲಿದ್ದರೂ ನಡುರಾತ್ರಿಯಲ್ಲಿ ನುಗ್ಗಿ ಸರಣಿ ಕಳ್ಳತನ ಮಾಡಿ, ಲಕ್ಷಾಂತರ ರೂ ಬೆಲೆಬಾಳುವ ನಗ-ನಾಣ್ಯದೊಂದಿಗೆ ಪರಾರಿಯಾಗುತ್ತಿದ್ದ ಮುಸುಕುಧಾರಿ ದರೋಡೆ-ಕೋರರ ತಂಡದ ಸದ್ದಡಗಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಈ ಕುರಿತು ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ವಿಜಯನಗರ ಜಿಲ್ಲೆಯ ಮುನಿರಬಾದ ಬಳಿಯ ನಿರ್ಜನ ಪ್ರದೇಶದಲ್ಲಿ ಇದ್ದ ಈ ಖದೀಮರನ್ನು, ಮಾರು ವೇಷದಲ್ಲಿ ಚಾಣಾಕ್ಷತನದಿಂದ ಕಾರ್ಯಾಚರಣೆ ನಡೆಸಿ ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದರು.

ಫೆ.16ರಂದು ಗದಗ-ಬೆಟಗೇರಿ ಅವಳಿ ನಗರದಲ್ಲಿ ಕೇವಲ 11 ನಿಮಿಷಗಳಲ್ಲಿ ಅಂಗಡಿಗಳ ಶೆಲ್ಟರ್ ಮುರಿದು ಲಕ್ಷಾಂತರ ನಗದು ದೋಚಿ ತಂಡ ಪರಾರಿಯಾಗಿತ್ತು. ತಕ್ಷಣ ಎಚ್ಚೆತ್ತ ಗದಗ ಪೊಲೀಸರು ವಿಶೇಷ ತಂಡವನ್ನು ರಚಿಸಿ ಈ ತಂಡವನ್ನು ಬಗ್ಗುಬಡಿಯುವ ಕಾರ್ಯಾಚರಣೆಗಿಳಿದಿದ್ದರು.





ಇದೀಗ ಮುಸುಕುಧಾರಿ ಕಳ್ಳರ ತಂಡವನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದು, ಬಂಧಿತರಿಂದ ಎರಡು ಬೈಕ್, 25 ಸಾವಿರ ರೂ ನಗದು ವಶಪಡಿಸಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಎಸ್ಪಿ ಬಿ.ಎಸ್. ನೇಮಗೌಡ, ಹೆಚ್ಚುವರಿ ಎಸ್ಪಿ ಎಮ್.ಬಿ. ಸಂಕದ, ಡಿವೈಎಸ್ಪಿ ಜೆ.ಎಚ್. ಇನಾಮದಾರ, ನರಗುಂದ ಡಿವೈಎಸ್ಪಿ ಪ್ರಭುಗೌಡ ಕಿರೇದಹಳ್ಳಿ ಮಾರ್ಗದರ್ಶನದಲ್ಲಿ ಬೆಟಗೇರಿ ಸಿಪಿಐ ಧೀರಜ್ ಸಿಂಧೆ ನೇತೃತ್ವದಲ್ಲಿ, ಬಡಾವಣೆ ಪಿಎಸ್‌ಐಗಳಾದ ಮಾರುತಿ ಜೋಗಂಡಕರ್, ಬಿ.ಟಿ. ರಿತ್ತಿ, ಸಿಬ್ಬಂದಿಗಳಾದ ಎನ್.ಡಿ. ಹುಬ್ಬಳ್ಳಿ, ಎಸ್.ಎಚ್. ಕಮತರ, ಪರಶುರಾಮ ದೊಡಮನಿ, ಅಶೋಕ ಗದಗ, ನಾಗರಾಜ್ ಬರಡಿ, ಅಕ್ಷಯ್ ಬದಾಮಿ, ಶಿವಾನಂದ ಲಮಾಣಿ, ಶಿವಕುಮಾರ್ ತಹಸೀಲ್ದಾರ್, ಗುರುರಾಜ್ ಬೂದಿಹಾಳ, ಸಂಜು ಕೊರಡೂರ ಒಳಗೊಂಡ ತಂಡ ವಿಶೇಷ ಕಾರ್ಯಚರಣೆ ನಡೆಸಿ ಬಂಧಿಸುವಲ್ಲಿ ಯಶಸ್ವಿಯಾಗಿದೆ.

ವಿಶೇಷ ಕಾರ್ಯಾಚರಣೆಯೊಂದಿಗೆ ಕಳ್ಳರ ತಂಡವನ್ನು ಬಂಧಿಸುವಲ್ಲಿ ಯಶಸ್ವಿಯಾದ ಪೊಲೀಸ್ ಸಿಬ್ಬಂದಿಗಳಿಗೆ ಇಲಾಖೆಯ ವತಿಯಿಂದ ಎಸ್‌ಪಿ ಬಿ.ಎಸ್. ನೇಮಗೌಡ ಬಹುಮಾನ ಘೋಷಿಸಿದ್ದಾರೆ.

> ಬೆಂಗಳೂರಿನ ನಾಯಂಡಹಳ್ಳಿ ಮೂರನೇ ಕ್ರಾಸ್‌ನ ತರಕಾರಿ ಮಾರ್ಕೆಟ್ ಬಳಿಯ ನಿವಾಸಿ ಅಶೋಕ ತಂದೆ ಶ್ರೀನಿವಾಸ (28), ತುಮಕೂರು ಜಿಲ್ಲೆಯ ಮಧುಗಿರಿ ತಾಲೂಕಿನ ಕಸಾಪೂರ ನಿವಾಸಿ ಮಂಜುನಾಥ್ ಅಲಿಯಾಸ್ ಕರಿಯಾ ತಂದೆ ನಾಗರಾಜ್ (28), ತುಮಕೂರಿನ ಹೆಬ್ಬೂರು ಹೋಬಳಿಯ ಶ್ರೀಕಂಟಯ್ಯನಪಾಳ್ಯ ನಿವಾಸಿ ಪ್ರಕಾಶ್ ಅಲಿಯಾಸ್ ಬೋಡಾ ತಂದೆ ಗಂಗಶಾನಯ್ಯ (34) ತುಮಕೂರಿನ ಉಪ್ಪಾರ ಹಳ್ಳಿ ನಿವಾಸಿ ಇಮ್ರಾನ್ ತಂದೆ ಅಮೀರ್ ಜಾನ್ (35) ಹಾಗೂ ಇನ್ನೊಬ್ಬ ಮಹಾರಾಷ್ಟ್ರದ ಸೊಲ್ಲಾಪುರ ಜಿಲ್ಲೆಯ ಅಕ್ಕಲಗೂಡು ತಾಲೂಕಿನ ಹೋಟಗಿ ನಿವಾಸಿ ಸಮರ್ಥ ತಂದೆ ರಮೇಶ್ ಜಾಧವ್ (19) ಎಂಬ ಆರೋಪಿಗಳನ್ನು ಬಂಧಿಸಲಾಗಿದ್ದು, ಇನ್ನೊಬ್ಬ ಪರಾರಿಯಾಗಿದ್ದಾನೆ.
>
> **– ಬಿ.ಎಸ್. ನೇಮಗೌಡ.**
> **ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.**


### ಎಸ್.ಸಿ.ಎಸ್.ಪಿ.-ಟಿ.ಎಸ್.ಪಿ.ಗೆ ಮೀಸಲಿಟ್ಟ ಹಣ ದುರ್ಬಳಕೆ ಆರೋಪ | ಬಿಜೆಪಿ ಎಸ್‌ಸಿ-ಎಸ್.ಟಿ ಮೋರ್ಚಾ ನೇತೃತ್ವದಲ್ಲಿ ಪ್ರತಿಭಟನೆ

# ಚುನಾವಣಾಪೂರ್ವ ಭರವಸೆಗಳನ್ನು ಸರ್ಕಾರ ಮರೆತಿದೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರ ಹಿಡಿಯಲು ಐದು ಗ್ಯಾರಂಟಿ ಘೋಷಿಸಿ ಈಗ ಎಸ್.ಸಿ.ಎಸ್.ಪಿ. ಮತ್ತು ಟಿ.ಎಸ್.ಪಿ.ಗೆ ಮೀಸಲಿಟ್ಟ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡು ಎಸ್.ಸಿ-ಎಸ್.ಟಿ.ಗಳಿಗೆ ಅನ್ಯಾಯ ಮಾಡುತ್ತಿದೆ ಎಂದು ಆರೋಪಿಸಿ ಸೋಮವಾರ ಡಂಬಳ ಹೋಬಳಿಯ ಬಿಜೆಪಿ ಪಕ್ಷದ ಎಸ್‌ಸಿ-ಎಸ್.ಟಿ ಮೋರ್ಚಾ ನೇತೃತ್ವದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ ಉಪತಹಸೀಲ್ದಾರ ಸಿ.ಕೆ. ಬೆಳವಟಗಿ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಡಂಬಳ ಹೋಬಳಿಯ ಬಿಜೆಪಿ ಪಕ್ಷದ ಅಧ್ಯಕ್ಷ ಅಂದಪ್ಪ ಹಾರೂಗೇರಿ ಮಾತನಾಡಿ, 2023 ಮತ್ತು 2024ನೇ ಸಾಲಿನಲ್ಲಿ ಒಟ್ಟು ಸುಮಾರು 25 ಸಾವಿರ ಕೋಟಿಯಷ್ಟು ಹಣವನ್ನು ಕಾಂಗ್ರೆಸ್ ಸರ್ಕಾರ ಬೇರೆ ಯೋಜನೆಗಳಿಗೆ ಬಳಸಿಕೊಂಡಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಸಬಲೀಕರಣ, ಶಿಕ್ಷಣ, ಉದ್ಯೋಗ ಸ್ವಾವಲಂಬನೆ ಮೂಲಕ ಪ್ರತಿ ವ್ಯಕ್ತಿ ಮತ್ತು ಕುಟುಂಬವನ್ನು ಸಶಕ್ತಗೊಳಿಸಬೇಕು. ದಲಿತ ಕೇರಿ, ಕಾಲೋನಿಗಳಿಗೆ, ಆದಿವಾಸಿ ಹಾಡಿಗಳಿಗೆ ಮೂಲ ಸೌಕರ್ಯ ಒದಗಿಸಬೇಕು. ಭೂ ಒಡೆತನ, ಭೂಮಿಗೆ ನೀರು, ಸ್ವ-ಉದ್ಯೋಗ,




ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ವಸತಿ ಶಾಲೆ, ಹಾಸ್ಟೆಲ್ ನಿರ್ಮಾಣ ಇದಕ್ಕಾಗಿ ಬಳಸಬೇಕಾದ ಹಣ ದುರುಪಯೋಗ ಮಾಡಿಕೊಂಡಿದ್ದು, ಬೇರೆ ಉದ್ದೇಶಕ್ಕೆ ಬಳಸಿ ಚುನಾವಣೆ ಸಂದರ್ಭದಲ್ಲಿ ನೀಡಿದ ಭರವಸೆಯನ್ನು ಈ ಸರ್ಕಾರ ಮರೆತಿದೆ ಎಂದು ದೂರಿದರು.

ಈ ಸಂದರ್ಭದಲ್ಲಿ ಈಶಪ್ಪ ರಂಗಪ್ಪನವರ, ಪಂಚಾಕ್ಷರಯ್ಯ ಹರ್ಲಾಪುರಮಠ, ಭೀರಪ್ಪ ಬಂಡಿ, ನಿಂಗಪ್ಪ ಮಾದರ, ಕುಬೇರಪ್ಪ ಬಂಡಿ, ರಾಜೇಶ ಅರಕಲ್ಲ, ಬಸುರಾಜ ಚನ್ನಳ್ಳಿ, ವೆಂಕನಗೌಡ ಪಾಟೀಲ್, ಚಂದ್ರು ಯಳಮಲಿ, ಶೇಖರಯ್ಯ ಗುರವಿನ, ವಿರುಪಾಕ್ಷಿ ಯಲಿಗಾರ, ಕುಮಾರಸ್ವಾಮಿ ಹೆಬ್ಬಳ್ಳಿಮಠ, ಸೋಮಶೇಖರ ಹಿರೇಮಠ, ಲಕ್ಷ್ಮಣ ಬೂದಿಹಾಳ, ಶಿವಾನಂದ ಹರಿಜನ, ಮಾರುತೆಪ್ಪ ಮ್ಯಾಗೇರಿ, ಪ್ರಭಣ್ಣ ಕರಮುಡಿ, ಪ್ರಕಾಶ ಕೋತಂಬ್ರಿ, ಶಿವಾನಂದ ಬಂಡಿ, ವಿನಾಯಕ ರಾಠೋಡ, ಶೇಖಪ್ಪ ಯಾವಗಲ್, ನಾಗರಾಜ ಮಳಲಿ, ವಿನಾಯಕ ರಾಠೋಡ, ಟಾಕ್ರಪ್ಪ ಲಮಾಣಿ, ಅಡವೆಪ್ಪ ಚೆನ್ನಪ್ಪಗೌಡ, ಈಶ್ವರಗೌಡ ಪಾಟೀಲ, ಪ್ರವೀಣ ವಡ್ಡಟ್ಟಿ, ಭರಮಪ್ಪ ನಾಗನೂರ ಮುಂತಾದವರಿದ್ದರು.

> ಎಸ್.ಸಿ ಮೋರ್ಚಾ ಅಧ್ಯಕ್ಷ ಕೆ.ಡಿ. ಬಂಡಿ, ಬಿಜೆಪಿ ಪಕ್ಷದ ಹಿರಿಯ ಮುಖಂಡ ಡಿ. ಪ್ರಸಾದ ಮಾತನಾಡಿ, ಎಸ್.ಸಿ-ಎಸ್‌ಟಿ ಸಂಘಟನೆಗಳು ಕಾಂಗ್ರೆಸ್ ಪಕ್ಷಕ್ಕೆ ಮಂಡಿಯೂರಿ ಪ್ರತಿಭಟನೆ ಮಾಡದೆ ಮಲಗಿಕೊಂಡಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ ರಾಜ್ಯ ಬಜೆಟ್ ಮುಸ್ಲಿಂ ಸಮುದಾಯವನ್ನು ಓಲೈಸುವ ಬಜೆಟ್ ಆಗಿದೆ. ಕೇವಲ ಒಂದು ಸಮುದಾಯದ ಓಲೈಕೆ ಮಾಡುತ್ತಿರುವುದು ಖಂಡನೀಯ ಎಂದರು.

### ಲಕ್ಷ್ಮೇಶ್ವರ ಪೊಲೀಸ್ ಠಾಣೆಗೆ ಬೆಂಕಿ ಹಚ್ಚಿದ ಪ್ರಕರಣ

# 23 ಜನರ ಆರೋಪ ಸಾಬೀತು!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

2017ರ ಫೆಬ್ರವರಿ 5ರಂದು ಪಟ್ಟಣದ ಪೊಲೀಸ್ ಠಾಣೆಗೆ ಬೆಂಕಿ ಹಚ್ಚಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ 8 ವರ್ಷಗಳ ನಂತರ 23 ಜನ ಆರೋಪಿಗಳಿಗೆ ಶಿಕ್ಷೆ ಪ್ರಕಟಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿತರಿಗೆ ಶಿಕ್ಷೆಯ ಪ್ರಮಾಣವನ್ನು ನ್ಯಾಯಾಲಯ ಕಾಯ್ದಿರಿಸಿದೆ.




**ಘಟನೆಯ ವಿವರ**

2017ರ ಫೆ.5ರಂದು ಲಕ್ಷ್ಮೇಶ್ವರ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಅಕ್ರಮ ಮರಳು ಸಾಗಿಸುವ ವಾಹನ ತಡೆದು ಚಾಲಕನನ್ನು ಪೋಲಿಸರು ಥಳಿಸಿದ್ದರೆಂದು ಆರೋಪಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಬಟ್ಟೂರು ಗ್ರಾಮದ ಚಾಲಕ ಶಿವಪ್ಪ ಡೋಣಿ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದ. ಸುದ್ದಿ ತಿಳಿಯುತ್ತಿದ್ದಂತೆ ಆತನ ಕುಟುಂಬಸ್ಥರು ಆಸ್ಪತ್ರೆಯಿಂದ ಶವವನ್ನು ತಂದು ಪೊಲೀಸ್ ಠಾಣೆಯ ಮುಂದೆ ಇಟ್ಟು ಪ್ರತಿಭಟನೆ ನಡೆಸಿದ್ದರು.

ಪ್ರತಿಭಟನೆಯ ಕಾವು ಹೆಚ್ಚಾಗಿ ಗಲಾಟೆಯ ವೇಳೆ ಪೊಲೀಸ್ ಠಾಣೆಯಲ್ಲಿದ್ದ ಪೀಠೋಪಕರಗಳು, ಪೊಲೀಸ್ ಜೀಪ್, ಹತ್ತಾರು ದ್ವಿಚಕ್ರವಾಹನಗಳಿಗೆ ಬೆಂಕಿ ಹಚ್ಚಿ ಆರೋಪಿಗಳು ತಮ್ಮ ಅಕ್ರೋಶವನ್ನು ವ್ಯಕ್ತಪಡಿಸಿದ್ದರು. ಪ್ರಕರಣ ನಡೆದ ನಂತರ ಗೃಹ ಸಚಿವರು, ಹಿರಿಯ ಪೊಲೀಸ್ ಅಧಿಕಾರಿಗಳು ಸೇರಿದಂತೆ ವಿವಿಧ ಪಕ್ಷಗಳ ಮುಖಂಡರು ಸ್ಥಳಕ್ಕೆ ಭೇಟಿ ನೀಡಿದ್ದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ 112 ಜನರ ಮೇಲೆ ಪ್ರಕರಣ ದಾಖಲಾಗಿತ್ತು. ಈ 112 ಜನರಲ್ಲಿ 8 ಜನರು ಮೃತಪಟ್ಟಿದ್ದು, ಓರ್ವ ಬಾಲಪರಾಧಿ ಇದ್ದಾನೆ. ಉಳಿದ 103 ಜನರ ಮೇಲೆ ತನಿಖೆ ನಡೆಸಲಾಗಿದ್ದು, ಅದರಲ್ಲಿ 23 ಜನರಿಗೆ ಕೋರ್ಟ್ ಶಿಕ್ಷೆಯನ್ನು ನೀಡಿದೆ. ನ್ಯಾಯಾಲಯದ ನ್ಯಾಯಾಧೀಶರಾದ ರಾಜೇಶ್ವರ ಶೆಟ್ಟಿ ಅವರಿಂದ ಸೋಮವಾರ ಆದೇಶ ಪ್ರಕಟವಾಗಿದ್ದು, ಶಿಕ್ಷೆಗೊಳಗಾದ 23 ಜನ ಆರೋಪಿತರನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ.



### ಜಿಲ್ಲೆಯಲ್ಲಿ ಒಟ್ಟು 32948 ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥ | ಜಿಲ್ಲಾ ನ್ಯಾ. ಬಸವರಾಜ ಮಾಹಿತಿ

# 'ಲೋಕ ಅದಾಲತ್' ಯಶಸ್ವಿ

■ವಿಜಯಸಾಕ್ಷಿ ಸುದ್ದಿ, ಗದಗ

ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯ ನವದೆಹಲಿ, ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ಗದಗ ಜಿಲ್ಲೆಯಲ್ಲಿ ಮಾರ್ಚ್ 8ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿತ್ತು. ಜಿಲ್ಲೆಯಲ್ಲಿ ಒಟ್ಟು 15 ಬೆಂಚ್‌ಗಳನ್ನು ರಚಿಸಿ ರಾಜೀ ಸಂಧಾನಕ್ಕೆ ಆಯ್ಕೆ ಮಾಡಿಕೊಳ್ಳಲಾಗಿತ್ತು. ಅದರಲ್ಲಿ 3749 ನ್ಯಾಯಾಲಯದಲ್ಲಿರುವ ಚಾಲ್ತಿ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಲಾಗಿದೆ ಹಾಗೂ 29199 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಲಾಗಿದ್ದು, ಒಟ್ಟು 32948 ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ.

ಗದಗದಲ್ಲಿ ಜರುಗಿದ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮದಲ್ಲಿ ಗೌರವಾನ್ವಿತ ಪ್ರಧಾನಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ, ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರ ಎಸ್.ಶೆಟ್ಟಿ, ಪ್ರಧಾನ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಖಾಶಿಮ ಚೂರಿಖಾನ್, 1ನೇ ಹೆಚ್ಚುವರಿ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಖಾದರಸಾಬ ಎಚ್.ಬೆನಕಟ್ಟಿ, ಪ್ರಧಾನ ಹಿರಿಯ ದಿವಾಣಿ



ನ್ಯಾಯಾಧೀಶರು ವ ಸಿಜೆಎಂ ಜಿ.ಆರ್. ಶೆಟ್ಟರ, ಅಪರ ಹಿರಿಯ ದಿವಾಣಿ ನ್ಯಾಯಾಧೀಶರಾದ ಪದ್ಮಶ್ರೀ ಆರ್.ಪಾಟೀಲ, ಜೆಎಂಎಫ್‌ಸಿ 1ನೇ ನ್ಯಾಯಾಲಯದ ದಿವಾಣಿ ನ್ಯಾಯಾಧೀಶರಾದ ದೀಪ್ತಿ ನಾಡಗೌಡ್ರ, ಜೆಎಂಎಫ್‌ಸಿ 2ನೇ ನ್ಯಾಯಾಲಯದ ದಿವಾಣಿ ನ್ಯಾಯಾಧೀಶರಾದ ಬೀರಪ್ಪ ಕಾಂಬಳೆ ಹಾಗೂ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಂ.ಐ. ಹಿರೇಮನಿಪಾಟೀಲ, ಉಪಾಧ್ಯಕ್ಷರಾದ ಎ.ಎಂ. ಹದ್ಲಿ, ಪ್ರಧಾನ ಕಾರ್ಯದರ್ಶಿ ಬಿ.ಎಚ್. ಮಾಡಲಗೇರಿ, ಜಂಟಿ ಕಾರ್ಯದರ್ಶಿ ಪಿ.ಬಿ. ಕಣಗಿನಹಾಳ, ಖಜಾಂಚಿ ವಿ.ಎಚ್. ಮೇರವಾಡೆ, ಸರ್ಕಾರಿ ಅಭಿಯೋಜಕರಾದ ಸವಿತಾ ಎಂ.ಶಿಗ್ಲಿ, ಎಂ.ಬಿ. ದೊಡ್ಡಗೌಡ್ರ, ಜಿಲ್ಲಾ ಸರ್ಕಾರಿ ವಕೀಲರಾದ ಎಂ.ಎಂ. ಕುಕನೂರ, ಅಪರಜಿಲ್ಲಾ ಸರ್ಕಾರಿ ವಕೀಲರಾದ ಜಿ.ಬಿ. ನೀಲರಡ್ಡಿ, ವಕೀಲ ವೃಂದದವರು, ಸಂಧಾನಕಾರ ವಕೀಲರು, ಪಕ್ಷಗಾರರು ಹಾಗೂ ಎಲ್ಲಾ ನ್ಯಾಯಾಲಯಗಳ ಸಿಬ್ಬಂದಿವರ್ಗ ಉಪಸ್ಥಿತರಿದ್ದು ಲೋಕ ಅದಾಲತ್ ಯಶಸ್ವಿಗೊಳಿಸಿದರು.

ಎಲ್ಲಾ ತಾಲೂಕಗಳ ನ್ಯಾಯಾಧೀಶರು ಹಾಗೂ ವಕೀಲ ವೃಂದದವರು, ಸಿಬ್ಬಂದಿವರ್ಗ, ಅಭಿಯೋಜನಾ ಇಲಾಖೆ, ಪೊಲೀಸ್ ಇಲಾಖೆ, ಅಬಕಾರಿ ಇಲಾಖೆ, ಗಣಿ ಮತ್ತು ಭೂ ಇಲಾಖೆ, ಕಾರ್ಮಿಕ ಇಲಾಖೆ, ಕಂದಾಯ ಇಲಾಖೆ ಅಧಿಕಾರಿಗಳು ಆಯಾ ತಾಲೂಕಾ ನ್ಯಾಯಾಲಯಗಳ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ರಾಜೀ ಸಂಧಾನ ಯಶಸ್ವಿಗೊಳಿಸಿದರು.

ರಾಷ್ಟ್ರೀಯ ಲೋಕ ಅದಾಲತ್‌ಗೆ ಸಹಕಾರ ನೀಡಿದ ಗದಗ ಜಿಲ್ಲೆಯ ವಕೀಲರ ಸಂಘದ ಸರ್ವ ಸದಸ್ಯರಿಗೆ, ಪಕ್ಷಗಾರರಿಗೆ, ಜಿಲ್ಲೆಯ ಎಲ್ಲಾ ನ್ಯಾಯಾಧೀಶರಿಗೆ, ಸಿಬ್ಬಂದಿ ವರ್ಗದವರಿಗೆ, ಜಿಲ್ಲಾ ನ್ಯಾಯಾಲಯದ ತಾಂತ್ರಿಕ ಸಿಬ್ಬಂದಿ ವರ್ಗದವರಿಗೆ, ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಕಂದಾಯ ಇಲಾಖೆ, ಜಿಲ್ಲಾ ಸರ್ಕಾರಿ ವಕೀಲರಿಗೆ, ಅಪರ ಜಿಲ್ಲಾ ಸರ್ಕಾರಿ ವಕೀಲರಿಗೆ, ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ, ಅಭಿಯೋಜನಾ ಇಲಾಖೆ, ಕಾರ್ಮಿಕ ಇಲಾಖೆ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ, ವಿಮೆ ಕಂಪನಿಯವರಿಗೆ, ಉಪ ವಿಭಾಗಾಧಿಕಾರಿಗಳಿಗೆ, ಗದಗ-ಬೆಟಗೇರಿ ನಗರಸಭೆ, ನಗರ ಯೋಜನಾ ಕೋಶ, ಬಿಎಸ್‌ಎನ್‌ಎಲ್, ಅಬಕಾರಿ ಇಲಾಖೆ, ಬ್ಯಾಂಕ್, ವಾರ್ತಾ ಇಲಾಖೆಯವರಿಗೆ ಹಾಗೂ ಎಲ್ಲಾ ಮಾಧ್ಯಮದವರಿಗೆ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಧನ್ಯವಾದಗಳನ್ನು ಅರ್ಪಿಸಿದ್ದಾರೆ.

> ಇತ್ಯರ್ಥಗೊಂಡ ಪ್ರಕರಣಗಳಲ್ಲಿ 13 ಮೋಟಾರು ವಾಹನ ಅಪಘಾತ ಪ್ರಕರಣಗಳು, 120 ಚೆಕ್‌ಬೌನ್ಸ್ ಪ್ರಕರಣಗಳು, 84 ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು, 155 ಪಾಲುವಾಟ್ನಿ ಪ್ರಕರಣಗಳು, 86 ಬ್ಯಾಂಕ್ ಹಾಗೂ ಹಣ ವಸೂಲಾತಿ ಪ್ರಕರಣಗಳು, 51 ವೈವಾಹಿಕ ಪ್ರಕರಣಗಳು, 43 ವಿದ್ಯುತ್ ಕಾಯ್ದೆ ಪ್ರಕರಣಗಳು ಹಾಗೂ ಇತರೆ ಪ್ರಕರಣಗಳು ಸ್ಥೆರಿದಂತೆ ಒಟ್ಟು 3749 ಚಾಲ್ತಿ ಪ್ರಕರಣಗಳು ಒಟ್ಟು ರೂ. 20,02,48,333/-ಗಳಿಗೆ ಪರಿಹಾರ ಒದಗಿಸುವುದರ ಮೂಲಕ ಇತ್ಯರ್ಥಪಡಿಸಲಾಗಿದೆ. ವ್ಯಾಜ್ಯಪೂರ್ವ ಪ್ರಕರಣಗಳಿಗೆ ಸಂಬಂಧಿಸಿದಂತೆ ವಿವಿಧ ಬ್ಯಾಂಕ್ ಪ್ರಕರಣಗಳು, ಕಂದಾಯ ಅದಾಲತ್ ಪ್ರಕರಣಗಳು ಸೇರಿದಂತೆ ಒಟ್ಟು 29,199 ವ್ಯಾಜ್ಯಪೂರ್ವ ಪ್ರಕರಣಗಳು ರೂ.3,87,28,092/-ಗಳಿಗೆ ರಾಜೀ ಸಂಧಾನವಾಗಿದೆ. ವಿವಿಧ ಕೌಟುಂಬಿಕ ಪ್ರಕರಣಗಳಲ್ಲಿ ಒಟ್ಟು 9 ಜೋಡಿಗಳು ಪುನಃ ಒಂದುಗೂಡಿ ಹೋಗಿರುತ್ತಾರೆ.

## ಸಂಪಾದಕೀಯ

# ಬಿಪಿಎಲ್ ಕಾರ್ಡ್ ಕೊಡದಿದ್ದರೆ ಗ್ಯಾರಂಟಿ ಯೋಜನೆ ವಿಫಲ

ಕಾಂಗ್ರೆಸ್ ಸರಕಾರದ ಪಂಚ ಗ್ಯಾರಂಟಿ ಯೋಜನೆ ಜಾರಿಯಾದ ನಂತರ ರಾಜ್ಯದಲ್ಲಿ ಬಿಪಿಎಲ್ ಕಾರ್ಡಿಗೆ ಎಲ್ಲಿಲ್ಲದ ಬೇಡಿಕೆ ವ್ಯಕ್ತವಾಗಿದೆ. ಬಡವರು ಮಾತ್ರವಲ್ಲದೇ ಸ್ಥಿತಿವಂತರೂ ಸಹ ಹೇಗಾದರೂ ಮಾಡಿ ಬಿಪಿಎಲ್ ಕಾರ್ಡ್ ಪಡೆದುಕೊಳ್ಳಬೇಕು ಎನ್ನುವ ಬಯಕೆ ಮಿತಿಮೀರಿದೆ.

ಆದರೆ ರಾಜ್ಯ ಸರ್ಕಾರ ಹೊಸ ಬಿಪಿಎಲ್ ಕಾರ್ಡ್ ವಿತರಣೆಯನ್ನ ಸಂಪೂರ್ಣವಾಗಿ ಸ್ಥಗಿತಗೊಳಿಸಿದೆ. ಹೊಸ ರೇಷನ್ ಕಾರ್ಡ್ ವಿತರಣೆ ಬದಲಾಗಿ, ಈ ಹಿಂದೆ ವಿತರಣೆ-ಯಾದ ಬಿಪಿಎಲ್ ಕಾರ್ಡ್‌ದಾರರ ಪೈಕಿ ಅನರ್ಹರನ್ನ ಗುರುತಿಸುವ ಕೆಲಸಕ್ಕೆ ಸರಕಾರ ಮುಂದಾಯಿತು.

ಸರ್ಕಾರ ಬಿಪಿಎಲ್ ಕಾರ್ಡ್ ಪಡೆದ ಅನರ್ಹರನ್ನು ಗುರುತಿಸುವ ಪ್ರಕ್ರಿಯೆ ಆರಂಭಿಸುತ್ತಿದ್ದಂತೆ, ಕೆಲ ಸರ್ಕಾರಿ ನೌಕರರು ಸಹ ಬಿಪಿಎಲ್ ಕಾರ್ಡ್ ಪಡೆದಿರುವುದು ಬೆಳಕಿಗೆ ಬಂದಿದೆ. ಆರ್ಥಿಕವಾಗಿ ಸದೃಢರಾಗಿರುವ ಜನರು ಬಿಪಿಎಲ್ ಕಾರ್ಡ್ ಹೊಂದಿದ್ದು ಗೊತ್ತಾಗಿದೆ.

ಸರಿಸುಮಾರು 20 ಲಕ್ಷ ಬಿಪಿಎಲ್ ಕಾರ್ಡ್‌ಗಳನ್ನು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ರದ್ದುಪಡಿಸಿದೆ.

ಸರ್ಕಾರದ ಈ ನಡೆ ಸ್ವಾಗತಾರ್ಹ.

ಆದರೆ ಅರ್ಹರಿಗೆ ಬಿಪಿಎಲ್ ಕಾರ್ಡ್ ವಿತರಣೆ ನಿಲ್ಲಿಸಿದ್ದು ಅಕ್ಷಮ್ಯ ಅಪರಾಧ. ಸರ್ಕಾರ ಗ್ಯಾರಂಟಿ ಯೋಜನೆಗಳ ಮೂಲಕ ಬಡವರ ಹಸಿವು ನೀಗಿಸುವ ಕೆಲಸ ಮಾಡುತ್ತಿದೆ. ಆದರೆ ಅರ್ಹರಿಗೆ ಬಿಪಿಎಲ್ ಕಾರ್ಡ್ ಕೊಡದೆ ಗ್ಯಾರಂಟಿ ಯೋಜನೆಗಳು ಅರ್ಹರಿಗೆ ಸಿಗದಂತೆ ಮಾಡಲಾಗುತ್ತಿದೆ.

ಸರ್ಕಾರ ತಕ್ಷಣ ಬಿಪಿಎಲ್ ಕಾರ್ಡ್ ವಿತರಣೆಯನ್ನು ಆರಂಭಿಸಬೇಕು. ಈ ಬಾರಿ ಹಿಂದಿನ ತಪ್ಪುಗಳು ಮರುಕಳಿಸದಂತೆ, ಮೊದಲೇ ಪರಿಶೀಲನೆ ನಡೆಸಿ ಅರ್ಹರಿಗೆ ಕಾರ್ಡ್ ತಲುಪಿಸಬೇಕು.

ಅಂದಾಗ ಮಾತ್ರ ಗ್ಯಾರಂಟಿ ಯೋಜನೆ ಫಲಪ್ರದವಾಗಲು ಸಾಧ್ಯ.

### ಬಾಲೆಹೊಸೂರ ಗ್ರಾಮದಲ್ಲಿ ಉತ್ತರಾಭಿಮುಖಿ ಶ್ರೀ ಆಂಜನೇಯಸ್ವಾಮಿ ನೂತನ ದೇವಸ್ಥಾನದ ಲೋಕಾರ್ಪಣೆ

# ಸಮಾಜಮುಖಿಯಾದಾಗಲೇ ಬದುಕಿಗೊಂದು ಅರ್ಥ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೇವಸ್ಥಾನಗಳು ಮನುಷ್ಯರಲ್ಲಿ ಶ್ರದ್ಧೆ, ಭಕ್ತಿ, ಧರ್ಮಮಾರ್ಗ ತೋರುವ ದೀವಿಗೆ ಮತ್ತು ಶಕ್ತಿ ಕೇಂದ್ರಗಳಾಗಿವೆ ಎಂದು ಬಾಲೆಹೊಸೂರು/ಶಿರಹಟ್ಟಿಯ ಫಕ್ಕೀರೇಶ್ವರ ಸಂಸ್ಥಾನ ಮಠದ ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳು ಹೇಳಿದರು.

ಅವರು ಶನಿವಾರ ತಾಲೂಕಿನ ಬಾಲೆಹೊಸೂರ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ ಉತ್ತರಾಭಿಮುಖಿ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದ ಲೋಕಾರ್ಪಣೆ ನಿಮಿತ್ತ ನಡೆದ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಾಗೂ ಕಳಸಾರೋಣ, ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಬಳಿಕ ನಡೆದ ಧರ್ಮಸಭೆಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಗ್ರಾಮೀಣ ಭಾಗದಲ್ಲಿ ಇನ್ನೂ ದೇವರು, ಧಾನ, ಧರ್ಮದ ಬಗ್ಗೆ ಅಪಾರ ನಂಬಿಕೆಯಿದೆ. ವಿವಿಧತೆಯಲ್ಲಿ ಏಕತೆ ಹೊಂದಿರುವ ಬಾಲೇಹೊಸೂರ ಗ್ರಾಮದ ಜನರು ಜಾತಿ-ಧರ್ಮ-ಪಕ್ಷ ಬೇಧ ಮರೆತು ಪರಸ್ಪರ ಅನ್ಯೋನ್ಯತೆ, ಶ್ರದ್ಧೆ, ಭಕ್ತಿಯಿಂದ ಸರ್ಕಾರದ ಅನುದಾನವಿಲ್ಲದೇ 80 ಲಕ್ಷ ರೂ ಖರ್ಚು ಮಾಡಿ ದೇವಸ್ಥಾನ ನಿರ್ಮಾಣ ಮಾಡಿರುವುದು ಸರಕಾರದ ಅನು(ಅಣು)ದಾನಕ್ಕಿಂತ ಭಕ್ತರ ಮಹಾದಾನ ಶ್ರೇಷ್ಠ ಎಂಬುದು ಸಾಬೀತುಪಡಿಸಿದ್ದೀರಿ. ಸಮಾಜ ನಮಗೇನು ಮಾಡಿದೆ ಎಂಬುದಕ್ಕಿಂತ ಸಮಾಜಕ್ಕೆ ನಮ್ಮ ಕೊಡುಗೆ ಏನು ಎಂಬ ಆತ್ಮಸಾಕ್ಷಾತ್ಕಾರ ಎಲ್ಲರದ್ದಾಗಬೇಕು ಎಂದರು.

ಆನಂದ ಗಡ್ಡದ್ದೇವರಮಠ ಮಾತನಾಡಿ, ಶ್ರೀ ದಿಂಗಾಲೇಶ್ವರ ಜಗದ್ಗುರುಗಳ ಶಕ್ತಿ-ಶ್ರೀರಕ್ಷೆ-ಆಶೀರ್ವಾದಿಂದ ಒಂದು ವರ್ಷದಲ್ಲಿ ಬಾಲೇಹೊಸೂರ ಸಂಪರ್ಕಿಸುವ ರಸ್ತೆಯನ್ನು ಪಕ್ಷಾತೀತವಾಗಿ



ಅಭಿವೃದ್ಧಿಪಡಿಸುತ್ತೇವೆ ಎಂದರು. ದೇವಸ್ಥಾನ ಜೀರ್ಣೋದ್ಧಾರ ಕಮಿಟಿ ಅಧ್ಯಕ್ಷ ಗೋಪಾಲರಾವ್ ಕುಬೇರ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮಾಜಿ ಶಾಸಕ ಜಿ.ಎಸ್. ಗಡ್ಡದ್ದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಸಂದರ್ಭೋಚಿತವಾಗಿ ಮಾತನಾಡಿದರು.

ವೇದಿಕೆಯ ಮೇಲೆ ಗ್ರಾ.ಪಂ ಅಧ್ಯಕ್ಷೆ ಚನ್ನಮ್ಮ ಮೈಲಾರಿ, ಲಕ್ಷ್ಮಣಗೌಡ ಪಾಟೀಲ, ಸಣ್ಣೀರಪ್ಪ ಹಳ್ಳೆಪ್ಪನವರ, ಜಿ.ಆರ್. ಕೊಪ್ಪದ, ಎಂ.ಎಸ್. ದೊಡ್ಡಗೌಡ್ರ, ಚನ್ನಪ್ಪ ಜಗಲಿ, ಶಂಕ್ರಣ್ಣ ಬಾಳಿಕಾಯಿ, ಗಣೇಶ ರಾಹುತನಕಟ್ಟಿ, ರಾಮಣ್ಣ ಗಡದವರ, ಕೃಷ್ಣ ಕುಲಕರ್ಣಿ, ರಾಮಣ್ಣ ಹಾವನೂರ, ನಿಂಗಪ್ಪ ಮಡಿವಾಳರ, ಬಸವರೆಡ್ಡಿ ಹನಮರಡ್ಡಿ, ಫಕ್ಕೀರೇಶ ಮ್ಯಾಟಣ್ಣವರ, ರಾಮಪ್ಪ ಗಡದವರ, ಶಾಮಣ್ಣ ಕಡೇಮನಿ, ಭರತರಾಜ ಗುಡಗೇರಿ, ಶಿವಣ್ಣ ಕಬ್ಬೇರ, ಯಲ್ಲಪ್ಪ ಸೂರಣಗಿ, ಹೂವಪ್ಪ ದೀಪಾವಳಿ, ದೇವಣ್ಣ ಮತ್ತೂರ, ಬಸವರಾಜ ಗೂಳಣ್ಣವರ, ಗುರುಪಾದಪ್ಪ ಜಾಲವಾಡಗಿ, ಜುಂಜಪ್ಪ ಮುದಿಯಮ್ಮನವರ, ಕರಿಯಪ್ಪ ಸಾಂದ್ಲಿ, ಜಗದೀಶ ಜೋಗೇರ, ಮಾರುತಿ ಕೊಳಲ, ಸೋಮಯ್ಯ ಚನ್ನಾಪೂರಮಠ, ಲಿಂಬಯ್ಯಸ್ವಾಮಿ ಮಾದಾಪೂರಮಠ, ರಮೇಶ ಜೋಗೇರ ಅನೇಕರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಎಂ.ಎಸ್. ಸೋಮಕ್ಕನವರ, ಕಜ್ಜರಿಯ ದೇವಸ್ಥಾನದ ಶಿಲ್ಪಿ ಗಣೇಶ ರಾಹುತನಕಟ್ಟಿ ಅವರನ್ನು ಸನ್ಮಾನಿಸಲಾಯಿತು. ಸಿದ್ಧಲಿಂಗಯ್ಯ ಪಶುಪತಿಮಠ, ಮಾರುತಿ ಸತ್ಯಮ್ಮನವರ, ಮೌನೇಶ ಹುದ್ದಣ್ಣವರ ನಿರೂಪಿಸಿದರು.



> ಸಮಾಜಮುಖಿಯಾಗಿ ಬದುಕಿದಾಗ ಮಾತ್ರ ಬದುಕಿಗೊಂದು ಅರ್ಥ ಬರುತ್ತದೆ. ತೆರೆದ ಹೃದಯ ಆಂಜನೇಯ ಸ್ವಾಮಿ ನಂಬಿದ ಭಕ್ತರ ಇಷ್ಟಾರ್ಥ ಸಿದ್ಧಿಸುತ್ತಾನೆ. ದೇವರು ಇದ್ದಾನೆ ಎಂಬುದಕ್ಕೆ ಆಂಜನೇಯ ಸ್ವಾಮಿ ಸೃಷ್ಟಿಸಿದ ಜಗತ್ತಿನ ಅತ್ಯದ್ಭುತ ಮತ್ತು ರಾಮೇಶ್ವರದ ಸೃಷ್ಟಿ ಇತಿಹಾಸವೇ ಸಾಕ್ಷಿಯಾಗಿದೆ. ಗ್ರಾಮದ ಜನರಲ್ಲಿನ ಧಾರ್ಮಿಕ ಭಕ್ತಿ, ಶ್ರದ್ಧೆಯಿಂದ ಗ್ರಾಮದಲ್ಲಿನ ಶ್ರೀ ದಿಂಗಾಲೇಶ್ವರ ಮಠ, ಅನೇಕ ದೇವಸ್ಥಾನಗಳು ಗ್ರಾಮದಲ್ಲಿನ ದೋಷ ಕಳೆದು ಶಾಂತಿ, ಸಮೃದ್ಧಿ, ಸಹಬಾಳ್ವೆ ನೆಲೆಸುವಂತಾಗಿರುವುದು ಸಂತಸ ತಂದಿದೆ.
>
> **- ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳು.**


# ಪುಟ್ಟರಾಜರು ಅಂಧ-ಅನಾಥರ ಬಾಳಿನ ದೇವರು

**■ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಪುಟ್ಟರಾಜ ಕವಿ ಗವಾಯಿಗಳು ಅಂಧ-ಅನಾಥರ ಬಾಳಿನ ದೇವರು. ನಾಡಿಗೆ ಬೆಳಕು ಬೀರಿ ಸಂಗೀತದ ಸಿರಿಯನ್ನು ಮನೆ-ಮನಕ್ಕೆ ತಲುಪಿಸಿ ಗದುಗಿನ ವೀರೇಶ್ವರ ಪುಣ್ಯಾಶ್ರಮದ ಕೀರ್ತಿಯನ್ನು ಹೆಚ್ಚಿಸಿದ ಪುಣ್ಯಾತ್ಮರು ಎಂದು ಸಖಿ-ಸಹೇಲಿ ಮಹಿಳಾ ಸಂಘಟನೆಯ ಗದಗ-ಜಿಲ್ಲಾ ನಿಯೋಜಿತ ಅಧ್ಯಕ್ಷೆ ಸುಮಾ ಪಾಟೀಲ ಹೇಳಿದರು.

ಅವರು ರವಿವಾರ ರಾಜ್ಯ ಜೇಂಟ್ಸ್ ವೆಲ್‌ಫೇರ್ ಫೌಂಡೇಶನ್‌ನ ಗದಗ ಜಿಲ್ಲಾ ಮಹಿಳಾ ಘಟಕ ಸಖಿ-ಸಹೇಲಿ ಸಂಘನೆಯಿಂದ ಹಮ್ಮಿಕೊಂಡಿದ್ದ ಪಂ.ಪುಟ್ಟರಾಜರ ಜಯಂತಿ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅತಿಥಿಗಳಾಗಿ ಆಗಮಿಸಿದ್ದ ಆಶಾ ಪಟ್ಟಣಶೆಟ್ಟಿ ಮಾತನಾಡಿ, ಸಂಗೀತ




ಸಾಹಿತ್ಯಕ್ಕೆ ವೀರೇಶ್ವರ ಪುಣ್ಯಾಶ್ರಮ ನೀಡಿದ ಕೊಡುಗೆ ಅಪಾರ. ಇಲ್ಲಿ ವಿದ್ಯಾರ್ಜನೆಗೈದ ಮಕ್ಕಳೆಲ್ಲರೂ ಸಾಹಿತಿಕವಾಗಿ ನಾಡಿನಾದ್ಯಂತ ಸಂಗೀತಗಾರರಾಗಿ ಜನ-ಮನ ಸೆಳೆದಿದ್ದಾರೆ. ಇವರಿಗೆ ದಾರಿ ತೋರಿದ ಆಶ್ರಮದ ಎಲ್ಲರೂ ಅಭಿನಂದನಾರ್ಹರು ಎಂದರು.

ರಾಜ್ಯ ಅಕ್ಕನಮನೆ ಪ್ರತಿಷ್ಠಾನದವರು ಕೊಡಮಾಡುವ ರಾಜ್ಯಮಟ್ಟದ ಅಕ್ಕ ಪ್ರಶಸ್ತಿಗೆ ಭಾಜನರಾದ ಗದುಗಿನ ಪಿ.ಪಿ.ಜಿ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಕೆ.ಬಿ. ಹಿರೇಮಠರನ್ನು ಸನ್ಮಾನಿಸಲಾಯಿತು. ರೇಣುಕಾ ಪಾಟೀಲ ಪ್ರಾರ್ಥಿಸಿದರು. ರೇಖಾ ರೊಟ್ಟಿ ಸ್ವಾಗತಿಸಿದರು. ಸುಶ್ಮಿತಾ ವೇರ್ಣೆಕರ ಪರಿಚಯಿಸಿದರು. ಪ್ರಿಯಾಂಕಾ ಹಳ್ಳಿ ನಿರೂಪಿಸಿದರು. ಕೊನೆಯಲ್ಲಿ ಮಧುಶ್ರೀ ಹಿರೇಮಠ ವಂದಿಸಿದರು. ಕಾರ್ಯಕ್ರಮದಲ್ಲಿ ಶೋಭಾ ಹಿರೇಮಠ. ನಿವೇದಿತಾ ಹಿಡ್ಕಿಮಠ, ಗೌರಿ ಕಡೆಮನಿ, ನಿರ್ಮಲಾ ಬಸಾಪೂರ, ಅನುಪಮಾ ಕಡಗದ, ಅನ್ನಪೂರ್ಣಾ ಸೊನ್ನದ, ಅಕ್ಕಮಹಾದೇವಿ ತುಪ್ಪದ, ವಿ.ಎಲ್. ವಾಲ್ಮೀಕಿ ಮುಂತಾದವರಿದ್ದರು.

# ಧಾರ್ಮಿಕ ಚಿಂತನೆಯಲ್ಲಿ ಸಂಸ್ಕೃತಿ ಅಡಕವಾಗಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ದೇಶದ ಇತಿಹಾಸವನ್ನು ನಾವು ನೋಡುತ್ತ ಹೋದಂತೆಲ್ಲ ಪುರಾಣ, ಪುಣ್ಯಕಥೆಗಳು, ವ್ಂಹಾಕಾವ್ಯಗ್ಳಾದ್ ರಾಮಾಯಣ, ಮಹಾಭಾರತ ಮತ್ತು ವಿವಿಧ ಕಥಾ ಪ್ರಸಂಗಗಳ ನಾಟಕಗಳು ನಮ್ಮ ಕಣ್ಣೆದುರಿಗೆ ಗೋಚರಿಸುತ್ತವೆ.

ಇಂತಹ ಪರಂಪರೆಯು ಧಾರ್ಮಿಕ ಚಿಂತನೆಯಲ್ಲಿ ಅಡಕವಾಗಿದೆ ಎಂದು ಅಡವಿಸೋಮಾಪೂರ ಗ್ರಾಮದ ಪಾಂಡುರಂಗ ಸಂತ ಮಂಡಳಿಯ ಗೌರವ ಅಧ್ಯಕ್ಷರಾದ ಭಾನುದಾಸ ಮೋಡಕರ ಅಭಿಪ್ರಾಯಪಟ್ಟರು.

ಅವರು ಇಲ್ಲಿನ ಅಡವಿಸೋಮಾಪೂರ ಗ್ರಾಮದಲ್ಲಿ ಶ್ರೀ ಸಂತ ಮಂಡಳಿ ಟ್ರಸ್ಟ್



ಕಮಿಟಿ ಅಡವಿಸೋಮಾಪೂರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಶ್ರೀ ಪಾಂಡುರಂಗ ದೇವಸ್ಥಾನದ 24ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವೇದಿಕೆಯ ಮೇಲೆ ಗ್ರಾ.ಪಂ ಸದಸ್ಯರಾದ ಮಲ್ಲಪ್ಪ ಅಸುಂಡಿ, ರಮೇಶ ಹಂಡಿ, ಬಸಮ್ಮ ಕನ್ಯಾಳ, ಪ್ರಮುಖರಾದ ರಾಜೇಸಾಬ ಪೆಂಡಾರಿ, ಗ್ರಾಮದ ಹಿರಿಯರಾದ ಆನಂದಪ್ಪ ಪುರದ, ಗೋಣೆಪ್ಪ ದುರ್ಗಣ್ಣವರ, ಮಂಜುನಾಥ ಸೊರಟೂರ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪ್ರಾಯೋಜಿತ ಸಾಂಸ್ಕೃತಿಕ ಕಲಾತಂಡವಾದ ಜೇನುಗೂಡು ಜಾನಪದ ಕಲಾತಂಡ ಹುಯಿಲಗೋಳ ಇವರಿಂದ ಜಾನಪದ ಸಂಗೀತ, ಭಾವಗೀತೆ, ಭಕ್ತಿಗೀತೆ ಮತ್ತು ಕನ್ನಡ ನಾಡು, ನುಡಿ, ಗೀತೆಗಳೊಂದಿಗೆ ಹಾಸ್ಯ ಕಾರ್ಯಕ್ರಮ ನಡೆಯಿತು. ಮಂಜುನಾಥ ಮಾದರ ಸ್ವಾಗತಿಸಿ ನಿರೂಪಿಸಿದರು. ರಾಜು ಪೆಂಡಾರಿ ವಂದಿಸಿದರು.

# ಸಖಿ-ಸಹೇಲಿ ಸಂಘಟನೆಯಿಂದ ಮಹಿಳಾ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸ್ತ್ರೀಯರು ಸಹನಾಶೀಲರು. ಪ್ರತಿಯೊಂದು ಕ್ಷೇತ್ರದಲ್ಲಿ ಸಾಧನೆಗೈದ ಮಹಿಳೆಯರು ಅಭಿನಂದನಾರ್ಹರು. ವೈದ್ಯಕೀಯ ಕ್ಷೇತ್ರದಲ್ಲಿ ರೋಗಿಗಳ ಮನಸ್ಸನ್ನು ಅರಿತು ಅವರ ನೋವಿಗೆ ಸ್ಪಂದಿಸಿ ಚಿಕಿತ್ಸೆ ನೀಡುವ ಚಿಂತನಜೀವಿ ವೈದ್ಯರುಗಳು ಎಂದು ರಾಜ್ಯ ಜೆಂಟ್ಸ್ ವೆಲ್‌ಫೇರ್ ಫೌಂಡೇಶನ್‌ನ ಗದಗ ಜಿಲ್ಲಾ ಘಟಕ ಸಖಿ-ಸಹೇಲಿಯ ನಿಯೋಜಿತ ಅಧ್ಯಕ್ಷೆ ಸುಮಾ ಪಾಟೀಲ ಹೇಳಿದರು.

ಅವರು ರವಿವಾರ ಸಖಿ-ಸಹೇಲಿಯಿಂದ ಅಚಿತಾರಾಷ್ಟ್ರೀಯ




ಮಹಿಳಾ ದಿನಾಚರಣೆ ಅಂಗವಾಗಿ ಜರುಗಿದ ಡಾ. ಅಪೂರ್ವ ರೇಷ್ಮೆ ಅವರ ಸನ್ಮಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಹಿಳೆಯರು ಸದಾ ಕ್ರಿಯಾಶೀಲತೆಯಿಂದ ಕೆಲಸ-ಕಾರ್ಯ ನಿರ್ವಹಿಸಿ ದುಡಿಯುವ ಕ್ಷೇತ್ರದಲ್ಲಿ ಸಮರ್ಥತೆ ಸಾಧಿಸಿದ್ದಾರೆ. ಇದು ಹೆಮ್ಮೆಯ ಸಂಗತಿ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಚಿಂತಕಿ ರಜನಿ ಪಾಟೀಲ ಮಾತನಾಡಿ, ಮಹಿಳೆಯರು ಸ್ವಾವಲಂಬನೆಚುನ್ನು ಸಾಧಿಸಬೇಕು. ವೈದ್ಯಕೀಯ ವೃತ್ತಿ ಪವಿತ್ರವಾದದ್ದು. ರೋಗಿಗಳ ಸೇವೆಯೇ ದೇವರ ಕೆಲಸ ಎಂದು ತಿಳಿದು ನಡೆದಲ್ಲಿ ಸಾಧನೆ ಸಾಧ್ಯ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಗದುಗಿನ ಚರ್ಮರೋಗ ತಜ್ಞೆ ಡಾ. ಅಪೂರ್ವ ರೇಷ್ಮೆ, ತಮ್ಮ ತಂದೆ ಗದುಗಿನ ಖ್ಯಾತ ಸ್ತ್ರೀರೋಗ ತಜ್ಞರಾದ ಡಾ. ಶಶಿಧರ ರೇಷ್ಮೆ ಅವರ ಮಾರ್ಗದರ್ಶನ ತಮಗೆ ಸ್ಫೂರ್ತಿಯಾಗಿದ್ದು, ಮಹಿಳೆಯರು ಮನಸ್ಸು ಮಾಡಿದಲ್ಲಿ ಯಶಸ್ಸು ಸಾಧ್ಯ ಎಂದರು.

ಆಶಾ ಪಟ್ಟಣಶೆಟ್ಟಿ ಸ್ವಾಗತಿಸಿದರು. ಪ್ರಿಯಾಂಕಾ ಹಳ್ಳಿ ನಿರೂಪಿಸಿದರು. ರೇಖಾ ರೊಟ್ಟಿ ಪರಿಚಯಿಸಿದರು. ಸುಶ್ಮಿತಾ ವೇರ್ಣೆಕರ ವಂದಿಸಿದರು. ಕಾರ್ಯಕ್ರಮದಲ್ಲಿ ಉಷಾ ರೇಷ್ಮೆ, ಪ್ರತಿಭಾ ಹುಬ್ಬಳ್ಳಿ, ಕಾವ್ಯ ದಂಡಿನ, ಗೀತಾ ಹೊಸಳ್ಳಿ, ಗಿರಿಜಾ ಪಾಟೀಲ ಮುಂತಾದವರಿದ್ದರು.

## ಆಘಾತಕಾರಿ ಘಟನೆ: 5 ವರ್ಷದ ಬಾಲಕಿ ಕತ್ತು ಸೀಳಿ ದೇವಾಲಯದ ಮೆಟ್ಟಿಲುಗಳಿಗೆ ರಕ್ತ ಅರ್ಪಿಸಿದ ಪಾಪಿ!

**■ವಿಜಯಸಾಕ್ಷಿ ಸುದ್ದಿ, ಗಾಂಧಿನಗರ**

ಗುಜರಾತ್‌ನ ಛೋಟೌದೇಪುರ ಜಿಲ್ಲೆಯಲ್ಲಿ ಆಘಾತಕಾರಿ ಘಟನೆಯೊಂದು ಜರುಗಿದೆ. ವ್ಯಕ್ತಿಯೊಬ್ಬ ಐದು ವರ್ಷದ ಬಾಲಕಿಯ ಕತ್ತು ಸೀಳಿ ಕೊಲೆ ಮಾಡಿ, ದೇವಾಲಯದ ಮೆಟ್ಟಿಲುಗಳ ಮೇಲೆ ರಕ್ತ ಅರ್ಪಿಸಿದ ಘಟನೆ ಜರುಗಿದೆ.ಹತ್ಯೆಗೈದ ಆರೋಪಿಯನ್ನು ಪೊಲೀಸರು ಬಂಧಿಸಿದ್ದು, ಆತನನ್ನು ಲಾಲಾ ತಡ್ವಿ ಎಂದು ಗುರುತಿಸಲಾಗಿದೆ. ಆರೋಪಿ, ಬುಡಕಟ್ಟು ಪ್ರಾಬಲ್ಯ ಹೊಂದಿರುವ ಜಿಲ್ಲೆ ಪನೇಜ್ ಗ್ರಾಮದಲ್ಲಿ ಬೆಳಿಗ್ಗೆ ಆಕೆಯ ತಾಯಿಯ ಎದುರೇ ಬಾಲಕಿಯನ್ನು ಆಕೆಯ ಮನೆಯಿಂದ ಅಪಹರಿಸಿದ್ದಾನೆ. ಬಳಿಕ ಬಾಲಕಿಯನ್ನು ತನ್ನ ಮನೆಗೆ ಕರೆದೊಯ್ದು, ಕೊಡಲಿಯಿಂದ ಆಕೆಯ ಕುತ್ತಿಗೆ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದ್ದಾನೆ. ಬಳಿಕ ಬಾಲಕಿಯ ಕುತ್ತಿಗೆಯಿಂದ ಹೊರಬರುತ್ತಿದ್ದ ರಕ್ತವನ್ನು ಸಂಗ್ರಹಿಸಿ, ಅದರಲ್ಲಿ ಸ್ವಲ್ಪ ಭಾಗವನ್ನು ತನ್ನ ಮನೆಯಲ್ಲಿರುವ ದೇವಾಲಯದ ಮೆಟ್ಟಿಲುಗಳ ಮೇಲೆ ಅರ್ಪಿಸಿದ್ದಾನೆ. ಆರೋಪಿಯು ಮಾಂತ್ರಿಕನಂತೆ ಕಾಣುತ್ತಿಲ್ಲ, ಮತ್ತು ಕೊಲೆಯ ಹಿಂದಿನ ನಿಖರವಾದ ಉದ್ದೇಶ ಇನ್ನೂ ಸ್ಪಷ್ಟವಾಗಿಲ್ಲ. ಪೊಲೀಸರ ತನಿಖೆಯಿಂದ ಸತ್ಯ ಹೊರಬರಬೇಕಾಗಿದೆ.

## ನಟಿ ರನ್ಯಾಗೆ ಕಾಂಗ್ರೆಸ್ ಸಚಿವರ ಬೆಂಬಲ ಆರೋಪ: ಬಿಜೆಪಿಗೆ ಟಕ್ಕರ್ ಕೊಟ್ಟ ಮಾಗಡಿ ಶಾಸಕ!

**■ವಿಜಯಸಾಕ್ಷಿ ಸುದ್ದಿ, ರಾಮನಗರ**

ಗೋಲ್ಡ್ ಸ್ಮಗ್ಲಿಂಗ್ ಕೇಸ್ ನಲ್ಲಿ ಬಂಧಿತರಾಗಿರುವ ನಟಿ ರನ್ಯಾ ರಾವ್‌ಗೆ ಕಾಂಗ್ರೆಸ್ ಸಚಿವರ ಬೆಂಬಲವಿದೆ ಎಂಬ ಬಿಜೆಪಿ ಆರೋಪಕ್ಕೆ ಮಾಗಡಿ ಶಾಸಕ ಹೆಚ್.ಸಿ.ಬಾಲಕೃಷ್ಣ ತಿರುಗೇಟು ನೀಡಿದ್ದಾರೆ.

ಈ ಸಂಬಂಧ ಮಾತನಾಡಿದ ಅವರು, ನಟಿ ರನ್ಯಾಗೆ ಈ ಹಿಂದೆ ಏಖಂಆಃ ಜಾಗ ಕೊಟ್ಟಿದ್ದೇ ಬಿಜೆಪಿ, ಈಗ ಕಾಂಗ್ರೆಸ್ ಮೇಲೆ ಆರೋಪ ಮಾಡೋ ನೈತಿಕತೆ ಅವರಿಗಿಲ್ಲ.

ಯಾರಾದ್ರೂ ಬಂದು ಸಹಕಾರ ಕೇಳ್ತಾರೆ. ಸಹಾಯ ಕೇಳಿಕೊಂಡು ಬಂದಾಗ ಯಾರು ಕಳ್ರು, ಯಾರು ಒಳ್ಳೆಯವರು ಗೊತ್ತಾಗಲ್ಲ. ಅವರು ಕದ್ದು ಸಿಕ್ಕಿಬಿದ್ದ ಮೇಲೆ ಕಳ್ಳರು ಅಂತ ಗೊತ್ತಾಗೋದು. ಆ ನಟಿಗೆ ಜಾಗ ಕೊಟ್ಟ ಬಿಜೆಪಿಗೆ ನಮ್ಮ ಮೇಲೆ ಆರೋಪ ಮಾಡುವ ನೈತಿಕತೆ ಇಲ್ಲ.

ಈ ವಿಚಾರದಲ್ಲಿ ರಾಜಕೀಯ ಮಾಡ್ತಿದ್ದಾರೆ. ಅವರು ರಾಜಕೀಯಕ್ಕೆ ಬಂದಿರೋದು ಅಭಿವೃದ್ಧಿ ಮಾಡೋಕಲ್ಲ. ಕೇವಲ ಕ್ಷುಲ್ಲಕ ರಾಜಕಾರಣ ಮಾಡೊದಕ್ಕೆ ಅಷ್ಟೇ ಎಂದು ಬಿಜೆಪಿ ನಾಯಕರ ಆರೋಪಕ್ಕೆ ಹೆಚ್.ಸಿ ಬಾಲಕೃಷ್ಣ ಟಾಂಗ್ ನೀಡಿದ್ದಾರೆ.

ಇನ್ನೂ ರಾಜ್ಯ ಬಜೆಟ್ ವಿರುದ್ಧ ಬಿಜೆಪಿ ಪ್ರತಿಭಟನೆ ನಡೆಸಿದ ವಿಚಾರ ಕುರಿತು ಮಾತನಾಡಿದ ಅವರು, ಅಲ್ಪಸಂಖ್ಯಾತರಿಗೆ ಅನುದಾನ ಕೊಟ್ಟಿದ್ದಕ್ಕೆ ಬಿಜೆಪಿಯವರು ಪ್ರತಿಭಟನೆ ಮಾಡಿದ್ದಾರೆ. ಅಲ್ಪಸಂಖ್ಯಾತರಿಗೆ ಕೊಟ್ಟಿರೋದು 4 ಸಾವಿರ ಕೋಟಿ, ನಮ್ಮ ಬಜೆಟ್ ಗಾತ್ರ 4 ಲಕ್ಷ ಕೋಟಿ. ಕೇವಲ ಒಂದು ಪರ್ಸೆಂಟ್ ಅಷ್ಟೇ ಕೊಟ್ಟಿದ್ದಕ್ಕೆ ಇವರಿಗೆ ಸಹಿಸಲು ಆಗ್ತಿಲ್ಲ. ಎಲ್ಲಾ ರೀತಿಯ ಅಭಿವೃದ್ಧಿಗೂ ಈ ಬಜೆಟ್ ಪೂರಕ ಎಂದಿದ್ದಾರೆ.


### ಪತ್ರಿಕಾಗೋಷ್ಠಿಯಲ್ಲಿ ಶಾಲಾ ವಾರ್ಷಿಕೋತ್ಸವದ ಕುರಿತು ವೀರನಗೌಡ ಈಶ್ವರಪ್ಪ ನಾಡಗೌಡ್ರ ಮಾಹಿತಿ

# ಮಕ್ಕಳ ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮೀಣ ಪ್ರದೇಶಲ್ಲಿನ ನಮ್ಮ ಶಿಕ್ಷಣ ಸಂಸ್ಥೆಯ ಸಾಧನೆ ಹಾಗೂ ಗುಣಮಟ್ಟದ ಶಿಕ್ಷಣವನ್ನು ನೋಡಿ ನಗರ ಪ್ರದೇಶದ ಜನರು ಸಹ ನಮ್ಮ ಶಾಲೆಯಲ್ಲಿ ತಮ್ಮ ಮಕ್ಕಳ ಪ್ರವೇಶವನ್ನು ಪಡೆಯಬೇಕು. ಈ ಭಾಗದ ಮಕ್ಕಳಿಗೆ ನಮ್ಮ ಸಂಸ್ಥೆ ಸ್ಫೂರ್ತಿದಾಯಕವಾಗಲಿದೆ ಎಂದು ಆಡಳಿತ ಮಂಡಳಿಯ ಉಪಾಧ್ಯಕ್ಷ ವೀರನಗೌಡ ಈಶ್ವರಪ್ಪ ನಾಡಗೌಡ್ರ ಅಭಿಪ್ರಾಯಪಟ್ಟರು.

ಡಂಬಳ ಹೋಬಳಿ ಬರದೂರ ಗ್ರಾಮದ ಚಟ್ಟೇರ ವಿದ್ಯಾವರ್ಧಕ ಸಂಘ, ಬಿಳಗಿ ಶ್ರೀ ಈಶ್ವರಪ್ಪ ಎಂ.ನಾಡಗೌಡ್ರ ಮತ್ತು ಬಾಳಪ್ಪ ನಾಡಗೌಡ್ರ ಇವರ ಸ್ಮರಣಾರ್ಥವಾಗಿ ಜ್ಞಾನಸೂರ್ತಿ ಇಂಟರ್‌ನ್ಯಾಷನಲ್ ಶಾಲೆ, ಪೂರ್ವ ಪ್ರಾಥಮಿಕ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ 1ರಿಂದ 5ನೇ ತರಗತಿ ಶಾಲಾ ಕಟ್ಟಡ ಉದ್ಘಾಟನಾ ಸಮಾರಂಭದ ಕುರಿತು ಡಂಬಳದ ಪ್ರವಾಸಿ ಮಂದಿರದಲ್ಲಿ



ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಸಂಸ್ಥೆಯ ಕಾರ್ಯದರ್ಶಿ ಡಾ. ಮೋಹನ ಮಹಾಲಿಂಗಪ್ಪ ಚಟ್ಟೇರ ಮಾತನಾಡಿ, ಬಡವರು, ದಲಿತರು, ಅಲ್ಪಸಂಖ್ಯಾತರು, ಹಿಂದುಳಿದ ವರ್ಗದ ತುಳಿತಕ್ಕೆ ಒಳಗಾದ ಹಾಗೂ ಶಿಕ್ಷಣದಿಂದ ವಂಚಿತವಾದ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ದೊರೆಯಬೇಕು. ನಮ್ಮ ಸಂಸ್ಥೆಯಲ್ಲಿ ನುರಿತ ಹಾಗೂ ಅನುಭವಿ ಶಿಕ್ಷಕರಿದ್ದು, ಉತ್ತಮ ಪರಿಸರ ಹಾಗೂ ಆಟದ ಮೈದಾನವಿದೆ. ನಮ್ಮ ಸಂಸ್ಥೆಯ ಬೆಳವಣಿಗೆಯಲ್ಲಿ ಈ ಭಾಗದ ಪಾಲಕರು ಹಾಗೂ ಮಕ್ಕಳ ಪ್ರೋತ್ಸಾಹ ಮತ್ತು ಸಹಕಾರ ಮಹತ್ವದ್ದಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಸದಸ್ಯ ಡಾ. ರಮೇಶ ದೇವರಡ್ಡಿ ರಾಮಣ್ಣವರ,

> ಮಾರ್ಚ್ 13ರಂದು ಬರದೂರ ಗ್ರಾಮದಲ್ಲಿ ಸಾಯಂಕಾಲ 6 ಗಂಟೆಗೆ ಜ್ಞಾನಸೂರ್ತಿ ಇಂಟರ್‌ನ್ಯಾಷನಲ್ ಶಾಲೆ, ಪೂರ್ವ ಪ್ರಾಥಮಿಕ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ 1ರಿಂದ 5ನೇ ತರಗತಿ ಶಾಲಾ ಕಟ್ಟಡ ಉದ್ಘಾಟನೆ ಸಮಾರಂಭದ ಹಾಗೂ ಸಂಗೀತ ರಸಮಂಜರಿ ಕಾರ್ಯಕ್ರಮ ನಡೆಯಲಿದೆ. ರಸಮಂಜರಿ ಕಾರ್ಯಕ್ರಮದಲ್ಲಿ ವಿಶೇಷ ಅತಿಥಿಯಾಗಿ ಮಹನ್ಯ ಗುರು ಪಾಟೀಲ, ಬಿಗ್ ಬಾಸ್ ಹಾಗೂ ಸರಿಗಮಪ ಖ್ಯಾತಿಯ ಹನಮಂತ ಲಮಾಣಿ ಭಾಗವಹಿಸುವರು ಎಂದು ವೀರನಗೌಡ ಈಶ್ವರಪ್ಪ ನಾಡಗೌಡ್ರ ಮಾಹಿತಿ ನೀಡಿದರು.

ಮುದಕನಗೌಡ್ರ ಬಾಳಪ್ಪ ನಾಡಗೌಡ್ರ ಶಾಲೆಯ ಮುಖ್ಯೋಪಾಧ್ಯಾಯ ಸತ್ಯಪ್ಪ ಲಕ್ಷ್ಮಪ್ಪ ತಳವಾರ ಇದ್ದರು.

## ನಾಳೆ ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ-2025 ನ್ನು ಮಾರ್ಚ್ 12 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.ನೆಗಳೂರು ಸಂಸ್ಥಾನ ಹಿರೇಮಠದ ಶ್ರೀ ಗುರು ಶಾಂತೇಶ್ವರ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸುವರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ ಆಗಮಿಸುವರು.

ವೀರೇಶ್ವರ ಪುಣ್ಯಾಶ್ರಮದ ಶಿವಕುಮಾರ ಶಾಸ್ತ್ರಿಗಳು ಶ್ರೀ ಜಗದ್ಗುರು ರೇಣುಕಾಚಾರ್ಯರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡುವರು. ಶ್ರೀಮತಿ ಅಕ್ಷತಾ ಹಿರೇಮಠ ಮತ್ತು ತಂಡದವರಿಂದ ಸುಗಮ ಸಂಗೀತ ಜರುಗಲಿದೆ.

ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ , ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಸ್ವಾಗತ ಕೋರಿದ್ದಾರೆ.

### ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಶೋಕ ಮಂದಾಲಿ

## ಯೋಜನೆಗಳ ಸೌಲಭ್ಯ ದುರುಪಯೋಗವಾಗದಿರಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದಿಂದ ಅನುಷ್ಠಾನಿತ ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಒದಗಬೇಕು. ಯೋಜನೆಗಳ ಸೌಲಭ್ಯದ ದುರುಪಯೋಗವಾಗದಂತೆ ನಿಗಾ ವಹಿಸಿ ಎಂದು ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ವಿಡಿಯೋ ಸಭಾಂಗಣದಲ್ಲಿ ಸೋಮವಾರ ಜರುಗಿದ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇಲಾಖೆ ಅಧಿಕಾರಿಗಳು ಗ್ಯಾರಂಟಿ ಯೋಜನೆಯ ಪ್ರಗತಿಯ ಕುರಿತು ನಿಖರ ಮಾಹಿತಿ ಒದಗಿಸಬೇಕು. ಗೃಹ ಲಕ್ಷ್ಮೀ ಹಾಗೂ ಯುವನಿಧಿ ಯೋಜನೆಯ ಕುರಿತು ಇನ್ನೂ ಹೆಚ್ಚಿನ ಅರಿವು ಮೂಡಿಸಬೇಕು. ನಗರದ ಹಳೇ ಬಸ್ ಹಾಗೂ ಹೊಸ ಬಸ್ ನಿಲ್ದಾಣದಲ್ಲಿ ಸ್ವಚ್ಛತೆಗೆ ಕ್ರಮ ವಹಿಸಬೇಕು. ನಗರದ ವಿವಿಧ ಪ್ರದೇಶಗಳಿಂದ ಜಿಮ್ಸ್ ಆಸ್ಪತ್ರೆಗೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಓಡಾಡುತ್ತಿದ್ದು, ಹೆಚ್ಚಿನ ಬಸ್‌ಗಳನ್ನು ಕಲ್ಪಿಸಲು ಕೆಎಸ್‌ಆರ್‌ಟಿಸಿಯವರು ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಬೇಕು ಎಂದು ಸೂಚಿಸಿದರು.

ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರಾದ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ, ಗೃಹಲಕ್ಷ್ಮೀ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಅಂಗನವಾಡಿ




ಮೇಲ್ವಿಚಾರಕಿಯರು ಹಾಗೂ ಅಂಗನವಾಡಿ ಕಾರ್ಯಕರ್ತೆಯರ ಸಭೆ ಕರೆದು ಸರ್ವೇ ಕಾರ್ಯ ಚುರುಕುಗೊಳಿಸಬೇಕೆಂದು ತಿಳಿಸಿದರು.

ಗೃಹಲಕ್ಷ್ಮೀ ಯೋಜನೆಯಡಿ ಡಿಸೆಂಬರ್ 2024ರವರೆಗೆ ಗದಗ ತಾಲೂಕಿನಲ್ಲಿ 77823 ನೋಂದಣಿಯಾದ ಅರ್ಜಿಗಳ ಪೈಕಿ 76521 ಅರ್ಜಿಗಳಿಗೆ ಮಂಜೂರಾತಿ ದೊರೆತಿದ್ದು, ಶೇ. 99.66 ಪ್ರಗತಿ ಸಾಧಿಸಿದೆ. ಜಿಲ್ಲೆಯಲ್ಲಿ ವಾ.ಕ.ರ.ಸಾ ಸಂಸ್ಥೆಯಿಂದ ಗದಗ ಘಟಕದಲ್ಲಿ 11-6-2023ರಿಂದ 05-03-2025ರವರೆಗೆ 12578976 ಪುರುಷ ಪ್ರಯಾಣಿಕರು ಹಾಗೂ 17681952 ಮಹಿಳಾ ಪ್ರಯಾಣಿಕರು ಸೇರಿದಂತೆ ಒಟ್ಟಾರೆ 30260928 ಪ್ರಯಾಣಿಕರು ಪ್ರಯಾಣಿಸಿದ್ದಾರೆ. ಶಕ್ತಿ ಯೋಜನೆಯಡಿ ಗದಗ ಘಟಕದಲ್ಲಿ 5193.21 ಲಕ್ಷ ರೂ. ಮಹಿಳಾ ಪ್ರಯಾಣಿಕರ ಆದಾಯವಾಗಿದೆ. ಬೆಟಗೇರಿ ಘಟಕದಲ್ಲಿ 3149.11 ಲಕ್ಷ ಮಹಿಳಾ ಪ್ರಯಾಣಿಕರ ಆದಾಯವಾಗಿದೆ.

ಅನ್ನಭಾಗ್ಯ ಯೋಜನೆಯಡಿ ಗದಗ ತಾಲೂಕಿನಲ್ಲಿ ನವೆಂಬರ್ 2024ರ ಮಾಹೆಯಲ್ಲಿ ಗದಗ ಪಡಿತರ ಪ್ರದೇಶದಲ್ಲಿ ಫಲಾನುಭವಿಗಳಿಗೆ 4,02,27,440 ರೂ.ಗಳನ್ನು ಡಿಬಿಟಿ ಮೂಲಕ ಹಣ ಸಂದಾಯ ಮಾಡಲಾಗಿದೆ. ಗೃಹಜ್ಯೋತಿ ಯೋಜನೆಯಡಿ 28-2-2025ರವರೆಗೆ ಗದಗ ಗ್ರಾಮೀಣ ಉಪ ವಿಭಾಗದಲ್ಲಿ ಶೇ 99.33ರಷ್ಟು ಪ್ರಗತಿಯಾಗಿದೆ. ಗದಗ ಶಹರ ಉಪವಿಭಾಗದಲ್ಲಿ ಶೇ 99.47 ಪ್ರಗತಿಯಾಗಿದೆ.

ಯುವನಿಧಿ ಯೋಜನೆಯಡಿ ಗದಗ ತಾಲೂಕಿನಲ್ಲಿ ಜನವರಿ 2025ರವರೆಗೆ 1704 ಫಲಾನುಭವಿಗಳ ನೋಂದಣಿಯಾಗಿದ್ದು, 826 ಅರ್ಹ ಫಲಾನುಭವಿಗಳಿಗೆ ಡಿಬಿಟಿ ಮೂಲಕ 24,57,000 ರೂ. ವರ್ಗಾವಣೆಯಾಗಿರುತ್ತದೆ ಎಂದು ಸಂಬಂಧಿತ ಅಧಿಕಾರಿಗಳು ಮಾಹಿತಿ ಒದಗಿಸಿದರು.

> ಅನ್ನಭಾಗ್ಯ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಆಹಾರ ಇಲಾಖೆಯ ಅಧಿಕಾರಿಗಳು ಪಡಿತರ ಅಂಗಡಿದಾರರ ಜೊತೆಗೆ ಸಭೆ ನಡೆಸಬೇಕು. ಅನ್ನಭಾಗ್ಯದ ಅಕ್ಕಿಯು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ವೃಥಾ ಅಕ್ಕಿಯು ಪೋಲಾಗದಂತೆ ಜಾಗ್ರತೆ ವಹಿಸಬೇಕು. ನಗರದಲ್ಲಿನ ಬೀದಿ ದೀಪಗಳ ಕಂಬದ ದುರಸ್ತಿಗೆ ಕ್ರಮ ವಹಿಸಬೇಕು. ಈ ನಿಟ್ಟಿನಲ್ಲಿ ಜನನಿಬಿಡ ಪ್ರದೇಶಗಳಲ್ಲಿ ವಿದ್ಯುತ್ ಅವಘಡಗಳಾಗದಂತೆ ಮುಂಜಾಗ್ರತೆ ವಹಿಸಬೇಕೆಂದು ಅಶೋಕ ಮಂದಾಲಿ ಹೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರಾದ ಶಂಭು ಕಾಳೆ, ಮೀನಾಕ್ಷಿ ಬೆನಕಣ್ಣವರ, ಸಂಗು ಕರಕಲಮಟ್ಟಿ, ನಿಂಗಪ್ಪ ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿನಾಯ್ಕರ್, ದೇವರೆಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ, ಗಣೇಶ ಸಿಂಗ್ ಮಿಟಾಡ, ಮಲ್ಲಪ್ಪ ಬಾರಕೇರ, ಭಾಷಾ ಮಲ್ಲಸಮುದ್ರ, ಸಾವಿತ್ರಿ ಹೂಗಾರ, ಶರೀಫ್, ತಾ.ಪಂ ಮ್ಯಾನೇಜರ್ ರುದ್ರಪ್ಪ ಬಾವಿ, ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನಿತ ಅಧಿಕಾರಿಗಳು ಹಾಜರಿದ್ದರು

## 160ನೇ ವರ್ಷದ ಕಾಮರತಿ ಉತ್ಸವ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಕಿಲ್ಲಾ ಓಣಿಯ ತ್ರಿಕೋಟೇಶ್ವರ ದೇವಸ್ಥಾನದ ಉತ್ತರ ದ್ವಾರದಲ್ಲಿ ಮಾ.14ರಂದು ಕಾಮರತಿಯ ಪ್ರತಿಷ್ಠಾಪನೆ, ಹಿರಿಯರಿಗೆ ಸನ್ಮಾನ, ಸಾಂಸ್ಕೃತಿಕ ಸಮಾರಂಭ, ಓಕಳಿ, ಕಾಮದಹನ ಹಾಗೂ ಅಲಕೃಂತಗೊಂಡ ರತಿ-ಕಾಮರ ಮೆರವಣಿಗೆ ಗದಗ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ.

2025ನೇ ಸಾಲಿನ ಕಿಲ್ಲಾ



ಸರ್ಕಾರಿ ಕಾಮರತಿಯರ 160ನೇ ವರ್ಷದ ಉತ್ಸವದ ಪದಾಧಿಕಾರಿಗಳನ್ನು ಸಭೆಯಲ್ಲಿ ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ಸುರೇಶ ಹೆಚ್.ಬಾಕಳೆ, ಉಪಾಧ್ಯಕ್ಷರಾಗಿ ಮನೋಹರ ದಲಬಂಜನ, ಗೌರವ ಕಾರ್ಯದರ್ಶಿಯಾಗಿ ವೆಂಕಟೇಶ ಖೋಡೆ, ಕಾರ್ಯದರ್ಶಿಯಾಗಿ ವೆಂಕಟೇಶ ಪಿ.ಭಾಂಡಗೆ, ಖಜಾಂಚಿಯಾಗಿ ಪ್ರಕಾಶ ಎಸ್. ಕಾಟಿಗರ ಆಯ್ಕೆಯಾದರು.

ಸಭೆಯಲ್ಲಿ ಹಿರಿಯರಾದ ಪರಶುರಾಮ ಬದಿ, ತುಳಸಿನಾಥಸಾ ಖೋಡೆ, ರಮೇಶ ಖೋಡೆ, ರಾಜೇಶ ಖೋಡೆ, ಪರಶುರಾಮ ಮಿಸ್ಕಿನ್, ಕೃಷ್ಣಾ ಬಿ.ಖೋಡೆ, ರಾಜು ಖೋಡೆ, ಸುಧೀರ ಆರ್. ಕಾಟಿಗರ, ಜಿ.ಎನ್. ಹಬೀಬ, ನಾಗರಾಜ ಖೋಡೆ, ಮಾಧುಸಾ ವಿ.ಬದಿ, ವೆಂಕಟೇಶ ಪಿ.ಖೋಡೆ, ರವಿ ಚವ್ಹಾಣ, ಸುನೀಲ ಬಸವಾ, ಮೋಹನ ಹಬೀಬ, ವಸಂತ ಬಾಕಳೆ, ಅಶ್ವಿನ ಹಬೀಬ, ಶ್ರೀಕಾಂತ ಪವಾರ, ಶೀನು ಜೆ.ಭಾಂಡಗೆ, ಪ್ರದೀಪ ಖಟವಟೆ, ವಿನೋದ ಪವಾರ ಮುಂತಾದವರು ಪಾಲ್ಗೊಂಡಿದ್ದರು.



ಇತ್ತೀಚೆಗೆ ಬೆಂಗಳೂರಿನಲ್ಲಿರುವ ಕಾನೂನು, ಪ್ರವಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರ ನಿವಾಸಕ್ಕೆ ಆಗಮಿಸಿದ ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿ ನೂತನ ರಾಜ್ಯಾಧ್ಯಕ್ಷ ಎಚ್.ಎಸ್. ಮಂಜುನಾಥ್ ಅವರನ್ನು ಸಚಿವ ಎಚ್.ಕೆ. ಪಾಟೀಲ ಸನ್ಮಾನಿಸಿ, ಅಭಿನಂದನೆಗಳನ್ನು ಸಲ್ಲಿಸಿದರು. ಈ ವೇಳೆ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ಗದಗ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಗದಗ-ಬೆಟಗೇರಿ ಶಹರ ಎನ್‌ಎಸ್‌ಯುಐ(ವಿದ್ಯಾರ್ಥಿ ಕಾಂಗ್ರೆಸ್) ಅಧ್ಯಕ್ಷ ಸಂಗಮೇಶ ಕೆರಕಲಮಟ್ಟಿ ಇದ್ದರು.

### ಎಂಸಿಎಸ್ ಶಾಲೆಯ ವಾರ್ಷಿಕೋತ್ಸವ ಸಮಾರಂಭದಲ್ಲಿ ಉಪನ್ಯಾಸಕ ಕೆ.ಪಿ. ಸಾಲಿಮಠ ಕಿವಿಮಾತು

## ಮಕ್ಕಳನ್ನು ಸಂಸ್ಕಾರವಂತರನ್ನಾಗಿ ಬೆಳೆಸಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಕ್ಕಳು ಓದಿನಲ್ಲಿ ಮುಂದೆ ಬರಲಿ ಎಂದು ನೀವು ಹೇಗೆ ಬಯಸುತ್ತೀರೋ ಹಾಗೆಯೇ ಅವರು ಸಂಸ್ಕಾರವಂತರಾಗಲಿ ಎಂದೂ ಬಯಸಿ. ಪ್ರಾಥಮಿಕ ಹಂತದಲ್ಲಿಯೇ ಮಕ್ಕಳಲ್ಲಿ ಒಳ್ಳೆಯ ಸಂಸ್ಕಾರ ಬೆಳೆಸಿದರೆ ದೇಶಕ್ಕೆ ಒಂದು ದೊಡ್ಡ ಕಾಣಿಕೆಯನ್ನು ನೀಡಿದಂತೆ ಎಂದು ಡಯಟ್‌ನ ಉಪನ್ಯಾಸಕ ಕೆ.ಪಿ. ಸಾಲಿಮಠ ಹೇಳಿದರು.

ಪಟ್ಟಣದ ಎಂಸಿಎಸ್ ಶಾಲೆಯಲ್ಲಿ ನಡೆದ ಶಾಲಾ ವಾರ್ಷಿಕೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿ, ನಿಮ್ಮ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆಂದು ಸರಕಾರ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಈ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ನಿಮ್ಮ ಮಕ್ಕಳು ಉನ್ನತವಾದ ಸ್ಥಾನಗಳನ್ನು ಪಡೆಯಲಿ. ಅದಕ್ಕೂ ಮೊದಲು ಅವರು ಸಂಸ್ಕಾರವಂತರಾಗಲಿ ಎಂದು ಹಾರೈಸಿದರು.




ಸಭೆಯನ್ನುದ್ದೇಶಿಸಿ ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ, ಮುಖ್ಯ ಶಿಕ್ಷಕ ಡಿ.ಎಚ್. ಪರಂಗಿ, ತಾಲೂಕಾ ದೈಹಿಕ ಶಿಕ್ಷಣ ಪರಿವೀಕ್ಷಕ ಆರ್.ಎಸ್. ನರೇಗಲ್ಲ, ಕೆಜಿಎಂಎಸ್ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕೊಟಗಿ ಮುಂತಾದವರು ಮಾತನಾಡಿದರು.

ವೇದಿಕೆಯ ಮೇಲೆ ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಈಶ್ವರೀಯ ಬ್ರಹ್ಮಕುಮಾರಿ ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ. ಸವಿತಕ್ಕ, ಶಿಕ್ಷಕ ಮಹಾದೇವಪ್ಪ ಬೇವಿನಕಟ್ಟಿ, ಬಸವರಾಜ ಶಿದ್ನೆಕೊಪ್ಪ, ಮುಖ್ಯ ಶಿಕ್ಷಕ ಪ್ರವೀಣಕುಮಾರ ಹಿರೇಮಠ. ಮುಖ್ಯ ಶಿಕ್ಷಕ ಬಿ.ಬಿ. ಕುರಿ, ಶಿಕ್ಷಕ ಜೆ.ಎ. ಪಾಟೀಲ ಮುಂತಾದವರಿದ್ದರು.

> ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಮಾತನಾಡಿ, ಈ ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳಷ್ಟೇ ಅಲ್ಲ, ಇಲ್ಲಿ ಸೇವೆ ಮಾಡಿದ ವ್ಯಕ್ತಿಗಳೂ ಸಹ ಭವಿಷ್ಯದಲ್ಲಿ ಉನ್ನತ ಸ್ಥಾನಗಳನ್ನು ಪಡೆದಿದ್ದಾರೆ. ಬರುವ ಶೈಕ್ಷಣಿಕ ವರ್ಷದಿಂದ ಈ ಶಾಲೆಯಲ್ಲಿಯೂ ಎಲ್‌ಕೆಜಿ ಮತ್ತು ಯುಕೆಜಿ ವರ್ಗಗಳು ಪ್ರಾರಂಭವಾಗುತ್ತಿದ್ದು, ನಿಮ್ಮ ಮಕ್ಕಳನ್ನು ಇಲ್ಲಿಗೆ ಕಳಿಸಿ ಅವರಿಗೆ ಉತ್ತಮ ಭವಿಷ್ಯವನ್ನು ರೂಪಿಸಿರಿ ಎಂದರು.

ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ತಿಮ್ಮರೆಡ್ಡಿ ಬಂಡಿವಡ್ಡರ ಅಧ್ಯಕ್ಷತೆ ವಹಿಸಿದ್ದರು. ದಿನಕರ ದೇಸಾಯಿ ನಿರೂಪಿಸಿದರು. ಮುಖ್ಯ ಶಿಕ್ಷಕಿ ಲಲಿತಾ ವ್ಯಾಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಂಗಡಿ ಸ್ವಾಗತಿಸಿದರು. ರಾಜೇಶ್ವರಿ ಹಿರೇಮಠ ವಂದಿಸಿದರು.

## ಪಟಾಕಿ ಅಂಗಡಿಯಲ್ಲಿ ಬೆಂಕಿ ಅವಘಡ: ಐವರು ಸಜೀವ ದಹನ!

**■ವಿಜಯಸಾಕ್ಷಿ ಸುದ್ದಿ, ರಾಂಚಿ**

ಪಟಾಕಿ ಅಂಗಡಿಯಲ್ಲಿ ಬೆಂಕಿ ಅವಘಡ ಸಂಭವಿಸಿ ಮೂವರು ಮಕ್ಕಳು ಸೇರಿ ಐವರು ಸಜೀವ ದಹನವಾಗಿರುವ ಘಟನೆ ಜಾರ್ಖಂಡ್‌ನ ಗರ್ವಾದಲ್ಲಿ ಜರುಗಿದೆ. ಘಟನೆ ಕುರಿತು ಮಾತನಾಡಿದ ರಂಕಾ ಎಸ್‌ಡಿಪಿಓ ರೋಹಿತ್ ರಂಜನ್ ಸಿಂಗ್, ಸೋಮವಾರ ಮಧ್ಯಾಹ್ನ 12.30ರ ಸುಮಾರಿಗೆ ಅಂಗಡಿಯಲ್ಲಿ ಪಟಾಕಿ ಮಾರಾಟ ಮಾಡುತ್ತಿದ್ದಾಗ ಬೆಂಕಿ ಕಾಣಿಸಿಕೊಂಡಿದೆ. ಪರಿಣಾಮ ಐವರು ಮೃತಪಟ್ಟಿದ್ದಾರೆ. ಕೂಡಲೇ ಗಾಯಾಳುಗಳನ್ನು ಛತ್ತೀಸ್‌ಗಢದ ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ. ಬೆಂಕಿ ಅವಘಡಕ್ಕೆ ನಿಖರ ಕಾರಣ ತಿಳಿದುಬಂದಿಲ್ಲ ಎಂದು ತಿಳಿಸಿದರು. ಇನ್ನೂ ಮುಖ್ಯಮಂತ್ರಿ ಹೇಮಂತ್ ಸೊರೆನ್ ಘಟನೆಯ ಕುರಿತು ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಳ್ಳುವ ಮೂಲಕ ಸಂತಾಪ ಸೂಚಿಸಿದ್ದಾರೆ.


## ನಿಯಂತ್ರಣ ತಪ್ಪಿ ರಸ್ತೆ ಪಕ್ಕದ ಗುಂಡಿಗೆ ಬಿದ್ದ ಬಸ್!

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ಕೆಎಸ್‌ಆರ್‌ಟಿಸಿ ಬಸ್ಸೊಂದು ನಿಯಂತ್ರಣ ತಪ್ಪಿ ರಸ್ತೆ ಪಕ್ಕದ ತಗ್ಗು ಗುಂಡಿಗೆ ಬಿದ್ದ ಘಟನೆ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಲಿಂಗದಳ್ಳಿ-ಅರವಳ್ಳಿ ಬಳಿ ನಡೆದಿದೆ. ಅದೃಷ್ಟವಶಾತ್ ಇಪ್ಪತ್ತಕ್ಕೂ ಅಧಿಕ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದು, ಬಸ್‌ನ ಬ್ರೇಕ್ ಫೇಲ್ ಆಗಿ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ. ಬಸ್‌ನಲ್ಲಿದ್ದ ಪ್ರಯಾಣಿಕರು ಕಿಟಕಿಯಿಂದ ಹೊರ ಬಂದಿದ್ದಾರೆ.ಹದಿನೈದಕ್ಕೂ ಅಧಿಕ ಪ್ರಯಾಣಿಕರಿಗೆ ಸಣ್ಣ ಪುಟ್ಟ ಗಾಯಗಳಾಗಿದ್ದು, ಸ್ಥಳೀಯ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಬೈಲಹೊಂಗಲ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## 'ಕಾವೆಂಶ್ರೀ' ವಿಧಿವಶ

**■ವಿಜಯಸಾಕ್ಷಿ ಸುದ್ದಿ, ಗದಗ**



ಕಾವೆಂಶ್ರೀ ಎಂದೇ ಖ್ಯಾತರಾಗಿದ್ದ, ಹೋಟೆಲ್ ಉದ್ಯಮ, ಕಲಾಸೇವೆಯಲ್ಲಿ ತೊಡಗಿಸಿಕೊಂಡು 2022ರಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಮನ್ ಕೀ ಬಾತ್ ಕಾರ್ಯಕ್ರಮದಲ್ಲಿ ಪ್ರಸ್ತಾಪಗೊಂಡಿದ್ದ ಕಾಳಮಂಜಿ ವೆಂಕಟಗಿರಿಯಪ್ಪ ಶ್ರೀನಿವಾಸ (ಕಾವೆಂಶ್ರೀ)(58) ಅವರು ಅನಾರೋಗ್ಯದ ಹಿನ್ನೆಲೆಯಲ್ಲಿ ನಗರದ ಖಾಸಗಿ ಆಸ್ಪತ್ರೆಯಲ್ಲಿ ಸೋಮವಾರ ನಿಧನರಾದರು.

ಅವರು ಕಲೆ, ಸಂಸ್ಕೃತಿಯ ಉಳಿವಿಗಾಗಿ 1996ರಲ್ಲಿ ಗದುಗಿನಲ್ಲಿ ಕಲಾಚೇತನ ಸಂಸ್ಥೆ ಸ್ಥಾಪಿಸಿದ್ದರು. ಈ ಸಂಸ್ಥೆಯ ಮೂಲಕ ಅಂತಾರಾಷ್ಟ್ರೀಯ ಮಟ್ಟದ ಕಲಾವಿದರ ಕಾರ್ಯಕ್ರಮ ಆಯೋಜನೆ ಬಗ್ಗೆ ಪ್ರಧಾನಿ ಮೋದಿ ಅವರು ಕಾವೆಂಶ್ರೀ ಅವರ ಸೇವೆಯನ್ನು ಮನ್ ಕಿ ಬಾತ್‌ನಲ್ಲಿ ಶ್ಲಾಘಿಸಿ ಸಂತಸ ವ್ಯಕ್ತಪಡಿಸಿದ್ದರು.

ಶಿವಮೊಗ್ಗ ಜಿಲ್ಲೆಯ ಕಾಳಮಂಜಿ ಮೂಲದ ಕಾವೆಂ ಶ್ರೀನಿವಾಸ ಅವರು ಗದಗ ನಗರದಲ್ಲೇ 34 ವರ್ಷದಿಂದ ವಾಸವಾಗಿದ್ದರು. ಕಲೆ-ಸಾಹಿತ್ಯ ಆಸಕ್ತಿ ಬೆಳೆಸಿಕೊಂಡಿದ್ದ ಅವರು ಪತ್ರಿಕೆಗಳಲ್ಲಿ ಕಲೆ, ಸಾಹಿತ್ಯದ ಬಗ್ಗೆ ಬರಹ ಬರೆಯುತ್ತಿದ್ದರು. ಮೃತರು ಪತ್ನಿ, ಪುತ್ರ, ಪುತ್ರಿ ಸೇರಿದಂತೆ ಅಪಾರ ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಕಾಳಮಂಜಿ ಗ್ರಾಮದಲ್ಲಿ ಸೋಮವಾರ ರಾತ್ರಿ ಜರುಗಿತು. ಅವರ ನಿಧನಕ್ಕೆ ಅಭಿಮಾನಿಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

### ಪುರಸಬೆಯಲ್ಲಿ ಮಿತಿಮೀರಿದ ಭ್ರಷ್ಟಾಚಾರ । ಸದಸ್ಯ ವಿಜಯ ಗಡಗಿ ಗಂಭೀರ ಆರೋಪ

## ಇಲ್ಲಿ ದುಡ್ಡು ಕೊಟ್ಟರಷ್ಟೇ ಕೆಲಸ!

**■ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ಪುರಸಭೆ ಕಚೇರಿಯಲ್ಲಿ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ. ಇಲ್ಲಿ ಎಲ್ಲ ಕೆಲಸಕ್ಕೂ ಹಣ ನೀಡಬೇಕು ಎಂದು ಸದಸ್ಯ ವಿಜಯ ಗಡಗಿ ಗಂಭೀರ ಆರೋಪ ಮಾಡಿದರು.

ಅವರು ಸೋಮವಾರ ಪುರಸಭೆಯ ಸಭಾಂಗಣದಲ್ಲಿ ಜರುಗಿದ ಸಾಮಾನ್ಯ ಸಭೆಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದರು.

ಕಚೇರಿಯಲ್ಲಿನ ಸಿಬ್ಬಂದಿಗಳು ವಿನಾಕಾರಣ ಫಲಾನುಭವಿಗಳನ್ನು ಅಲೆದಾಡಿಸುತ್ತಾರೆ. ಸ್ವತಃ ಸದಸ್ಯರೇ ಹೇಳಿದರೂ ಸಾರ್ವಜನಿಕರ ಕೆಲಸವಾಗುವುದಿಲ್ಲ. ನೇರವಾಗಿ ಬಂದು ಸಿಬ್ಬಂದಿಗಳಿಗೆ ದುಡ್ಡು ಕೊಟ್ಟರೆ ನಾಲ್ಕು ದಿನಗಳಲ್ಲಿ ಅವರಿಗೆ ಉತಾರ ಸಿಗುತ್ತದೆ. ಬಡವರು, ನಿರ್ಗತಿಕರಿಗೆ ಮಾತ್ರ ಸೌಲಭ್ಯ ದೊರೆಯುತ್ತಿಲ್ಲ. ಅವರ ಬಳಿ ಹಣ ಇರುವುದಿಲ್ಲ ಎಂಬ ಕಾರಣಕ್ಕೆ ಅವರನ್ನು ಅಲೆದಾಡಿಸುತ್ತೀರಿ ಎಂದು ತೀವ್ರ ಆಕ್ರೋಶ ಹೊರಹಾಕಿದರು.



ಇದಕ್ಕೆ ಪಕ್ಷಬೇಧ ಮರೆತು ಸದಸ್ಯರು ಧ್ವನಿಗೂಡಿಸುತ್ತಿದ್ದಂತೆ ಮುಖ್ಯಾಧಿಕಾರಿ ರಮೇಶ ಹೊಸಮನಿ, ಕಚೇರಿಯಲ್ಲಿ ಆ ರೀತಿ ನಡೆದಿಲ್ಲ ಎನ್ನುತ್ತಿದ್ದಂತೆ ಬೋರ್‌ವೆಲ್ ರಿಪೇರಿ ನೆಪದಲ್ಲಿ ಖರ್ಚು ಹಾಕಿದ್ದೀರಿ. ನಮ್ಮಲ್ಲಿ ಸುಸ್ಥಿತಿಯಲ್ಲಿರುವ ಎರಡು ಮೋಟಾರ್ ಇದ್ದು, ಇನ್ನುಳಿದ ಮೋಟಾರ್‌ಗಳು ಬಂದಾಗಿವೆ. ಹೀಗಿದ್ದರೂ ಖರ್ಚು ಹಾಕಿದ್ದೀರಿ. ಅಲ್ಲದೆ ಕಚೇರಿಯಲ್ಲಿ ಭ್ರಷ್ಟಾಚಾರ ನಡೆಯುತ್ತಿಲ್ಲ ಎನ್ನುತ್ತೀರಾದರೆ, ನಾನು ಸಾಕ್ಷಿ ಕೊಡುತ್ತೇನೆ. ಅದು ವಿಫಲವಾದಲ್ಲಿ ನಾನು ರಾಜೀನಾಮೆ ಕೊಡುತ್ತೇನೆ ಎಂದು ಸವಾಲೆಸೆದರು.

ಮಧ್ಯ ಪ್ರವೇಶಿಸಿದ ಸದಸ್ಯ ಸಂಗನಗೌಡ ಪಾಟೀಲ, ಸಿಬ್ಬಂದಿ ತಪ್ಪು ಮಾಡಿದ್ದರೆ ಅವರ ಮೇಲೆ ಕ್ರಮ ತೆಗೆದುಕೊಳ್ಳಿ ಎಂದರು.

> ಪುರಸಭೆ ವ್ಯಾಪ್ತಿಯಲ್ಲಿನ ಸಂಕೀರ್ಣಗಳ ಬಾಡಿಗೆಯನ್ನು ವಸೂಲಿ ಮಾಡಿ, ಇಲ್ಲದಿದ್ದರೆ ನೋಟಿಸ್ ನೀಡಿ ಸಿಜ್ ಮಾಡಿ ಎಂದು ಸದಸ್ಯ ಗದಿಗೆಪ್ಪ ಕಿರೇಸೂರ ಮುಖ್ಯಾಧಿಕಾರಿಗಳಿಗೆ ಸೂಚಿಸಿದರು. ಇದಕ್ಕೂ ಎಲ್ಲ ಸದಸ್ಯರು ಬೆಂಬಲ ವ್ಯಕ್ತಪಡಿಸಿ ಬಾಡಿಗೆ ಕೊಡದಿದ್ದರೆ ಅವರ ಆಸ್ತಿಗಳ ಮೇಲೆ ಭೋಜಾ ದಾಖಲಿಸಿ ಎಂದರು.

ಇದೀಗ ಬೇಸಿಗೆ ಆರಂಭವಾಗಿದ್ದು, ಕುಡಿಯುವ ನೀರಿನ ತೊಂದರೆಯಾಗದಂತೆ ನಿಗಾ ವಹಿಸಬೇಕು. ಮೋಟರ್ ಅಳವಡಿಕೆಯಲ್ಲಿ ಆಗಿರುವ ಭ್ರಷ್ಟಾಚಾರ ಕುರಿತು ತನಿಖೆ ನಡೆಸಬೇಕು ಎಂದು ಸಭೆಯಲ್ಲಿ ಸದಸ್ಯರು ಆಗ್ರಹಿಸಿದರು.

ಗೀತಾ ಮಾಡಲಗೇರಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷ ದುರ್ಗಪ್ಪ ಹಿರೇಮನಿ, ಬಾವಾಸಾಬ ಬೆಟಗೇರಿ, ಸಂಗಪ್ಪ ಜಿಡ್ಡಿಬಾಗಿಲ, ಸಂತೋಷ ಕಡಿವಾಲ ಸೇರಿದಂತೆ ಸದಸ್ಯರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka